# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 213 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 11–03–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 Issue - 213 | Title- Code: KARKAN 28269 | Chitradurga | Date: 11-03-2024 Monday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಹಿರೇಕೆರೆ ಕಾವಲು ಗೋಶಾಲೆಗೆ ಜಿಲ್ಲಾಧಿಕಾರಿ ಭೇಟಿ 2

ಬರದ ನಡುವೆ ವೋಲ್ಟೇಜ್ ವ್ಯತ್ಯಾಸಕ್ಕೆ ಮೋಟಾರ್ ದುರಸ್ತಿ ಹೊರೆ 3

ಶಿವನನ್ನು ನಂಬಿದ ಭಕ್ತರಿಗೆ ಯಾವುದೆ ಕಂಟಕ ಎದುರಾಗದು: ರಘುಮೂರ್ತಿ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಗುರಿ ಮುಟ್ಟಲೇಬೇಕೆಂಬ ದೋರಣೆ ಮತ್ತು ಗುರಿ ಮುಟ್ಟಲು ಮಾಡುವ ಪ್ರಯತ್ನ, ಎರಡರ ಬಗ್ಗೆಯೂ ನಿರಂತರತೆ ಮತ್ತು ದೃಢತೆ ಇದ್ದರೆ ಮಾತ್ರ ನಾವು ಗುರಿ ಮುಟ್ಟಲು ಸಾಧ್ಯ.

» ಶುಭೋದಯ

## ಫಾಸ್ಟ್ ನ್ಯೂಸ್

### ಶ್ರೀಪಾತಲಿಂಗೇಶ್ವರಸ್ವಾಮಿ ಜಾತ್ರೆ ಮಾ.16, 17ರಂದು



» ಚಳ್ಳಕೆರೆ

ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಚನ್ನಮ್ಮನಾಗತಿಹಳ್ಳಿ ಗ್ರಾಮದಲ್ಲಿ ಪಾತಲಿಂಗೇಶ್ವರ ಸ್ವಾಮಿಯ ಜಾತ್ರಾ ಮಹೋತ್ಸವವನ್ನು ಮಾರ್ಚ್ 16 ಮತ್ತು 17 ಎರಡು ದಿನಗಳ ಕಾಲ ನಡೆಸಲಾಗುವುದು ಎಂದು ದೇವಸ್ಥಾನ ಸಮಿತಿ ಸದಸ್ಯ ಕರೀಕೆರೆ ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಅವರು, ಪ್ರತಿವರ್ಷದಂತೆ ಈ ವರ್ಷವೂ ಸಹ ಶ್ರೀಪಾತಲಿಂಗೇಶ್ವರ ಸ್ವಾಮಿ ಜಾತ್ರೆಯಲ್ಲಿ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಬದಗಿಸುವಲ್ಲಿ ದೇವಸ್ಥಾನದಆಡಳಿತಮಂಡಳಿಸರ್ವಸಿದ್ದತೆಯನ್ನು ನಡೆಸಿದೆ. ಮಾರ್ಚ್16ರ ಶನಿವಾರ ಚನ್ನಮ್ಮನಾಗತಿಹಳ್ಳಿ ಗ್ರಾಮದಿಂದ ದೇವರನ್ನು ವಿವಿಧ ಕಲಾತಂಡಗಳೊಂದಿಗೆ ಮೆರವಣಿಗೆ ಮೂಲಕ ದೇವಸ್ಥಾನಕ್ಕೆ ಕರೆತರಲಾಗುವುದು, 17ರ ಭಾನುವಾರ ಬೆಳಗ್ಗೆ 5 ಗಂಟೆಗೆ ರುದ್ರಾಭಿಷೇಕ, 10ಕ್ಕೆ ಮಹಾಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ ಕಾರ್ಯಕ್ರಮ ನಡೆಯಲಿದೆ. ಗೊರವಿಕೆರೆ ವಂಶಸ್ಥರು ಮತ್ತು ಭಕ್ತರು ಸಕಾಲಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸ್ವಾಮಿಯ ಮೆರವಣಿಗೆ ಹಾಗೂ ಪೂಜಾಕಾರ್ಯದಲ್ಲಿ ಪಾಲ್ಗೊಂಡು ಜಾತ್ರೆಯನ್ನು ಯಶಸ್ವಿಗೊಳಿಸಿಕೊಡಬೇಕೆಂದು ದೇವಸ್ಥಾನ ಆಡಳಿತ ಮಂಡಳಿ ಮನವಿ ಮಾಡಿದೆ. ಕೇಂದ್ರ ಸಚಿವ ಎ.ನಾರಾಯಣಸ್ವಾಮಿ, ಕ್ಷೇತ್ರದ ಶಾಸಕ ಟಿ.ರಘುಮೂರ್ತಿ, ಪರಶುರಾಮಪುರ ಮಾಜಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕಿರಣ್‌ಶಂಕರ್ ಮತ್ತು ಗೊರವಿನಕೆರೆ ವಂಶಸ್ಥರು ಜಾತ್ರಾ ಕಾರ್ಯಕ್ರಮದಲ್ಲಿ ಭಾಗವಹಿಸುವರು.

### ಕುರುಕ್ಷೇತ್ರ ಪೌರಾಣಿಕನಾಟಕ ಮಾರ್ಚ್ 13ರಂದು

» ಚಳ್ಳಕೆರೆ

ಗ್ರಾಮ ದೇವತೆ ಶ್ರೀಚಳ್ಳಕೆರೆಯಮ್ಮ ವಿಶೇಷ ಜಾತ್ರೆ ಪ್ರಯುಕ್ತ ಶ್ರೀರಂಗಭಾರತಿ ಸಂಸ್ಕೃತಿಕ ಕಲಾಸಂಘದ ವತಿಯಿಂದ ನಾಲ್ಕನೇ ಬಾರಿಗೆ ಕುರುಕ್ಷೇತ್ರ ಅರ್ಥಾತ್ ಗಧಾಯುದ್ದ ಎಂಬ ಪೌರಾಣಿಕ ನಾಯಕವನ್ನು ಮಾರ್ಚ್ 13ರ ಬುಧವಾರ ರಾತ್ರಿ 8ಕ್ಕೆ ಬಿ.ಎಂ.ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ನಡೆಸಲಾಗುವುದು ಎಂದು ಕಲಾಸಂಘದ ಪ್ರತಿನಿಧಿ ಲೆಜೆಂಟ್ ಓ.ಬೋರಯ್ಯ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ಕಾರ್ಯಕ್ರಮದಲ್ಲಿ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ, ಚಿತ್ರದುರ್ಗ ಕ್ಷೇತ್ರದ ಶಾಸಕ ಕೆ.ಸಿ.ವೀರೇಂದ್ರ, ಹಿರಿಯ ರಂಗಭೂಮಿ ಕಲಾವಿದ ಎಸ್.ತಿಪ್ಪೇಸ್ವಾಮಿ, ಕನ್ನಡರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತಿ ಪಿ.ತಿಪ್ಪೇಸ್ವಾಮಿ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಬೆಂಗಳೂರು ಕಬ್ಬಾಳಮ್ಮ ಅರ್ಥ್ ಮೂವರ್ಸ್‌ನ ಮಾಲೀಕ ಶಕುನಿಪಾತ್ರದಾರಿಯಾಗಿ ಎಂ.ನಾಗರಾಜು, ದುರುಯೋಧನ ಪಾತ್ರಧಾರಿ ಎಂ.ಬಿ.ಬೋರಯ್ಯ, ಕೃಷ್ಣನ ಪಾತ್ರಧಾರಿ ಓ.ಬೋರಯ್ಯ, ಧರ್ಮರಾಯನ ಪಾತ್ರಧಾರಿ ಗೋವಿಂದರಾಜು, ಭೀಮಸೇನ ಪಾತ್ರದಲ್ಲಿ ಟಿ.ಮಂಜಣ್ಣ, ಅರ್ಜುನ ಪಾತ್ರದಲ್ಲಿ ಗಾಡಿಓಬಣ್ಣ, ಕರ್ಣನ ಪಾತ್ರದಲ್ಲಿ ಗೋಚಿಗಾರಬೋರಣ್ಣ, ಬೀಷ್ಮನ ಪಾತ್ರದಲ್ಲಿ ವೈ.ಎ.ತಿಪ್ಪೇಸ್ವಾಮಿ, ದುಷ್ಯಸನ ಪಾತ್ರದಲ್ಲಿ ಬಿ.ಟಿ.ಮಂಜುನಾಥ, ದೃತರಾಷ್ಟ್ರನ ಪಾತ್ರದಲ್ಲಿ ಹನುಮಂತಪ್ಪ ಅಭಿನಯಿಸುವರು.

### ಪಿ.ಆರ್.ತಿಪ್ಪೇಸ್ವಾಮಿ ಸ್ಮಾರಕ ಹಾಗೂ ಪುತ್ಥಳಿ ಅನಾವರಣ

# ಪಿಆರ್‌ಟಿ ಪ್ರತಿಷ್ಠಾನಕ್ಕೆ 10 ಲಕ್ಷ ಗೌರವ ಧನ

» ಚಿತ್ರದುರ್ಗ

ಪಿ.ಆರ್.ಟಿ ಎಂದೇ ಜನಮಾನಸದಲ್ಲಿ ಹೆಸರಾಗಿರುವ ಹಿರಿಯೂರು ತಾಲ್ಲೂಕು ಹರ್ತಿಕೋಟೆಗ್ರಾಮದಪಿ.ಆರ್.ತಿಪ್ಪೇಸ್ವಾಮಿ ನಿಸ್ವಾರ್ಥದಿಂದ ಸಮಾಜಮುಖಿ ಜೀವನ ನಡೆಸಿದವರು. ಅವರ ಕೊಡುಗೆಗಳನ್ನು ನೆನಪಿಸುವ ಕೆಲಸವನ್ನು ಪಿ.ಆರ್.ಟಿ ಪ್ರತಿಷ್ಠಾನ ಮಾಡಬೇಕು. ಈ ಕಾರ್ಯಕ್ಕೆ ಒಂದು ವಾರದಲ್ಲಿಯೇ ರೂ.10ಲಕ್ಷ ಗೌರವ ಧನ ನೀಡುವುದಾಗಿ ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ ಭರವಸೆ ನೀಡಿದರು.

ಪಿ.ಆರ್.ತಿಪ್ಪೇಸ್ವಾಮಿ ಪ್ರತಿಷ್ಠಾನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತ ಆಶ್ರಯದಲ್ಲಿ, ಹಿರಿಯೂರು ತಾಲ್ಲೂಕು ಹರ್ತಿಕೋಟೆಯಲ್ಲಿ,ಭಾನುವಾರ ಆಯೋಜಿಸಿದ್ದ ಪಿ.ಆರ್. ತಿಪ್ಪೇಸ್ವಾಮಿಯವರ ನವೀಕೃತ ಸ್ಮಾರಕ ಲೋಕಾರ್ಪಣೆ ಹಾಗೂ ಪುತ್ಥಳಿ ಅನಾವರಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ನವೀಕೃತ ಸ್ಮಾರಕ ನಿರ್ಮಾಣ ಕಾರ್ಯ ನಾಡಿಗೆ ಮಾದರಿಯಾಗಿದೆ. ಮೈಸೂರು ವಿಶ್ವ ವಿದ್ಯಾಲಯದಲ್ಲಿ ಪಿ.ಆರ್. ತಿಪ್ಪೇಸ್ವಾಮಿ ಕೆಲಸ ಮಾಡುತ್ತಿದ್ದಾಗ, ಜಿಲ್ಲೆಯ ಹಿಂದುಳಿದ ಭಾಗಗಳಿಂದ ವಿದ್ಯಾಭ್ಯಾಸ ಹರಿಸಿ ಮೈಸೂರಿಗೆ ಬರುವ ವಿದ್ಯಾರ್ಥಿಗಳಿಗೆ ಆಸರೆಯಾಗಿದ್ದರು. ಅವರ ನಿಸ್ವಾರ್ಥವಾದ ಪ್ರೇಮ ಹಾಗೂ ಕಾಳಜಿಯಿಂದ ಬಹಳಷ್ಟು ಜನ ಉನ್ನತ ವಿದ್ಯಾಭ್ಯಾಸ ಗಳಿಸಿ ಜೀವನಮಟ್ಟ ಸುಧಾರಿಸಿಕೊಂಡಿದ್ದಾರೆ. ಕ್ರೀಯಾಶೀಲ ವ್ಯಕ್ತಿತ್ವದ ಪಿ.ಆರ್.ಟಿ ಬದುಕಿನ ಉದ್ದಕ್ಕೂ ಸಮಾಜ ಕಟ್ಟವ ಕೆಲಸ ಮಾಡಿದರು ಎಂದು ಸಚಿವ.ಡಿ.ಸುಧಾಕರ್ ಸ್ಮರಿಸಿದರು.





ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಮಾತನಾಡಿ, ದೇಶದ ನೂರಾರು ವಿದ್ಯಾರ್ಥಿಗಳು ಹಾಗೂ ಕಲಾವಿದರ ಬದುಕಿಗೆ ಪಿ.ಆರ್.ಟಿ ದಾರಿ ದೀಪವಾಗಿದ್ದಾರೆ. ಪಿ.ಆರ್.ಟಿ ಅವರ ಸಾಹಿತ್ಯ ಕೃಷಿ ವಿಭಿನ್ನವಾದದು. ಎಂದಿಗೂ ಅವರು ತಮ್ಮ ಸಾಹಿತ್ಯವನ್ನು ವ್ಯಾಪಾರೀಕರಣ ಮಾಡಲಿಲ್ಲ. ತಾವು ಬರೆದ ಕೃತಿಗಳನ್ನು ಇತರರಿಗೆ ಮಾರಾಟ ಮಾಡದೆ ಸ್ನೇಹಿತರಿಗೆ ಕೊಡುಗೆಯಾಗಿ ಕೊಟ್ಟಿದ್ದಾರೆ. ಆಸೆ ಆಮಿಷಕ್ಕೆ ಬಲಿಯಾಗದೆ, ಸ್ವಾರ್ಥ ರಹಿತ ಬದುಕು ಜೀವಿಸಿದ ಪಿ.ಆರ್.ಟಿ ನಮಗೆಲ್ಲರಿಗೂ ಆದರ್ಶಪ್ರಾಯರಾಗಿದ್ದಾರೆ. ಬೆಂಗಳೂರು ಮಹಾನಗರದಲ್ಲಿನ ಒಂದು ವೃತ್ತಕ್ಕೆ ಹಾಗೂ ಮೈಸೂರಿನ ವಿಶ್ವವಿದ್ಯಾಲಯದ ವಸ್ತು ಸಂಗ್ರಹಾಲಯಕ್ಕೆ ಇವರ ಹೆಸರನ್ನು ನಾಮಕರಣ ಮಾಡುವ ಕುರಿತು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸುತ್ತೇನೆ. ಈ ವಿಚಾರದಲ್ಲಿ ಸಕಾರಾತ್ಮಕ ತೀರ್ಮಾನ ತೆಗೆದುಕೊಳ್ಳುವ ಭರವಸೆಯನ್ನು ಕೆ.ವಿ.ಪ್ರಭಾಕರ್ ವ್ಯಕ್ತಪಡಿಸಿದರು. ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಕಾಗಿನೆಲೆ ಕನಕ ಗುರು ಪೀಠದ ಜಗದ್ಗುರು ಶ್ರೀ ನಿರಂಜನಾನಂದ ಪುರಿ ಮಹಾಸ್ವಾಮೀಜಿ, ಸಾಮಾನ್ಯ ವ್ಯಕ್ತಿಯ ಹುಟ್ಟು ಹಾಗೂ ಜೀವನ ಚಾರಿತ್ರಿಕವಾಗಬೇಕಾದರೆ ಅವರ ಜೀವನ ಸಾಧನೆ ಜಗತ್ತಿಗೆ ಮಾದರಿಯಾಗಿರಬೇಕು. ಅಂತಹ ಚಾರಿತ್ರಿಕ ವ್ಯಕ್ತಿತ್ವ ಪಿ.ಆರ್. ತಿಪ್ಪೇಸ್ವಾಮಿ ಅವರದ್ದಾಗಿದೆ. ವೈಯಕ್ತಿಕ ಜೀವನ ಬದಿಗೊತ್ತಿ, ಮದುವೆಯೂ ಅಗದೇ, ಪಿ.ಆರ್.ಟಿ ಅವರು ಸಮಾಜವೇ ತನ್ನ ಕುಟುಂಬ ಎಂದು ಭಾವಿಸಿ ಬದುಕಿದವರು. ಅವರ ಸಾಧನೆ ಅಪಾರವಾದದು. ಪಿ.ಆರ್.ಟಿ.ಚಿತ್ರಕಲೆಯೇ ಜೀವನದ ಉಸಿರನ್ನಾಗಿಸಿ ಸ್ವೀಕರಿಸಿದವರು. ಎಲ್ಲ ವರ್ಗದ ಮಕ್ಕಳಿಗೆ ವಿದ್ಯಾಧಾನ, ಅನ್ನದಾನಮಾಡಿ ಅವರ ಬದುಕಿಗೆ ಆಸರೆಯಾದರು. ಅವರಿಂದ ಸಹಾಯ ಪಡೆದ ಎಲ್ಲರ ಮನಸ್ಸಲ್ಲಿ ಪಿ.ಆರ್.ಟಿ ಸ್ಥಿರವಾಗಿ ಉಳಿದಿದ್ದಾರೆ. ಪಿ ಆರ್ ಟಿ ಪ್ರತಿ ಪ್ರತಿಷ್ಠಾನದ ಸಹಕಾರದಿಂದ ಅವರ ಸ್ಮಾರಕ ನಿರ್ಮಾಣದ ಕೆಲಸ ಆಗಿದೆ. ಇದೇ ಮಾದರಿಯಲ್ಲಿ ಹರ್ತಿಕೋಟೆ ಗ್ರಾಮದ ಅಭಿವೃದ್ಧಿಗೆ ಎಲ್ಲರೂ ಕೈಜೋಡಿಸಿ ಸಹಕರಿಬೇಕು ಎಂದು ನಿರಂಜನಾನಂದ ಪುರಿ ಮಹಾಸ್ವಾಮೀಜಿ ಕೋರಿದರು.

ಪಿ.ಆರ್.ಟಿ ಪ್ರತಿಷ್ಠಾನದ ಸಂಚಾಲಕ ಅರ್ತಿಕೋಟೆ ರುದ್ರಣ್ಣ ಮಾತನಾಡಿ, ಪಿ.ಆರ್.ಟಿ ಅವರ ಪರಿಶ್ರಮದ ಫಲವಾಗಿ ಮೈಸೂರಿನ ವಸ್ತು ಸಂಗ್ರಹಾಲಯ ಏಷ್ಯಾದಲ್ಲಿ ಪ್ರಸಿದ್ಧಿ ಪಡೆದಿದೆ. ಇದರೊಂದಿಗೆ ಧರ್ಮಸ್ಥಳ ಸುತ್ತೂರಿನಲ್ಲಿ ವಸ್ತು ಸಂಗ್ರಹಾಲಯ ನಿರ್ಮಿಸಿದ ದಾಖಲೆ ಇವರದು. ಕವಿ ದ.ರಾ.ಬೇಂದ್ರೆ ಪಿ.ಆರ್.ಟಿ ಅವರನ್ನು ಜಾನಪದ ಜಂಗಮ ಹಾಡಿ ಹೊಗಳಿದ್ದಾರೆ ಎಂದು ಅವರ ಸಾಧನೆಯನ್ನು ಸ್ಮರಿಸಿದರು.

ಈ ಸಮಾರಂಭದಲ್ಲಿ ಪಿಆರ್‌ಟಿ ಪ್ರತಿಷ್ಠಾನದ ಅಧ್ಯಕ್ಷ ರಾಜಶೇಖರ್ ಕದಂಬ, ಗೌರವ ಕಾರ್ಯದರ್ಶಿ ಮಹದೇವ ಶೆಟ್ಟಿ, ಪ್ರಜಾಪ್ರಗತಿ ಪತ್ರಿಕೆ ಸಂಪಾದಕ ಎಸ್ ನಾಗಣ್ಣ, ಗ್ರಾ.ಪಂ.ಅಧ್ಯಕ್ಷ ಪ್ರತಾಪ ಸಿಂಹ, ಉಪಾಧ್ಯಕ್ಷೆ ಮಹೇಶ್ವರಿ ಗೋಡೆ ತಿಪ್ಪೇಸ್ವಾಮಿ, ಜಿ.ಪಂ. ಮಾಜಿ ಅಧ್ಯಕ್ಷೆ ಶಶಿಕಲಾ ಸುರೇಶ್, ಸ್ಮಾರಕ ಶಿಲ್ಪಿ ನರಸಿಂಹರಾಜು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಕಾರ್ಯಕ್ರಮದ ಅಂಗವಾಗಿ ಆಯೋಜಿಸಲಾಗಿದ್ದ ಚಿತ್ರಕಲಾ ಸ್ಪರ್ಧೆಯಲ್ಲಿ ವಿಜೇತರಾದ ಮಕ್ಕಳಿಗೆ ನಗದು ಬಹುಮಾನದೊಂದಿಗೆ ಪ್ರಶಸ್ತಿಪತ್ರ ನೀಡಿ ಗೌರವಿಸಲಾಯಿತು.

## ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್‌ಗೆ ಸ್ವಾಗತ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಗೆ ಆಗಮಿಸಿದ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರನ್ನು ಹಿರಿಯೂರು ತಾಲ್ಲೂಕು ಹರ್ತಿಕೋಟೆಯಲ್ಲಿ ವಾರ್ತಾ ಇಲಾಖೆಯಿಂದ ಹೂಗುಚ್ಛ ನೀಡಿ ಸ್ವಾಗತಿಸಲಾಯಿತು.

ಹರ್ತಿಕೋಟೆ ಗ್ರಾಮದಲ್ಲಿ ಪಿ.ಆರ್. ತಿಪ್ಪೇಸ್ವಾಮಿ ಪ್ರತಿಷ್ಠಾನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಪಿ.ಆರ್. ತಿಪ್ಪೇಸ್ವಾಮಿಯವರ ನವೀಕೃತ ಸ್ಮಾರಕ ಲೋಕಾರ್ಪಣೆ ಹಾಗೂ ಪುತ್ಥಳಿ ಅನಾವರಣ ಕಾರ್ಯಕ್ರಮದಲ್ಲಿ ಭಾಗವಹಿಸಲು ಅವರು ಆಗಮಿಸಿದ್ದರು. ಈ ವೇಳೆ ಕಾಗಿನೆಲೆ ಕನಕ ಗುರು ಪೀಠದ ಜಗದ್ಗುರು ಶ್ರೀ ನಿರಂಜನಾನಂದ ಪುರಿ ಮಹಾಸ್ವಾಮೀಜಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರನ್ನು ಸ್ಮಾನಿಸಿದರು. ಈ ಸಂದರ್ಭದಲ್ಲಿ ವಾರ್ತಾ ಇಲಾಖೆಯ ವೇಣುಗೋಪಾಲ.ಪಿ.ಎಂ. ಚಂದ್ರಶೇಖರ್, ಬೋರೇಶ್, ಪಿ.ಆರ್.ಟಿ ಪ್ರತಿಷ್ಠಾನದ ಪಿಆರ್‌ಟಿ ಪ್ರತಿಷ್ಠಾನದ ಅಧ್ಯಕ್ಷ ರಾಜಶೇಖರ್ ಕದಂಬ, ಗೌರವ ಕಾರ್ಯದರ್ಶಿ ಮಹದೇವ ಶೆಟ್ಟಿ,ಸಂಚಾಲಕ ಹರ್ತಿಕೋಟೆ ರುದ್ರಣ್ಣ ಉಪಸ್ಥಿತರಿದ್ದರು.



## ಈ ಬಾರಿ ಬಜೆಟ್‌ನಲ್ಲಿ ಅಭಿವೃದ್ಧಿಗೆ ಮೀಸಲಿಟ್ಟ ಹಣ 1.20 ಲಕ್ಷ ಕೋಟಿ



- **ಅಭಿವೃದ್ಧಿಗೆ ದುಡ್ಡಿಲ್ಲವೆಂಬ ಬಿಜೆಪಿ ಮತ್ತೊಂದು ಸುಳ್ಳು: ಬಹಿರಂಗ ಚರ್ಚೆಗೆ ಬರುವಂತೆ ಬಿಜೆಪಿಗೆ ಸವಾಲೆಸೆದ ಸಿಎಂ**

» ಹೊಸಕೋಟೆ

ಬಜೆಟ್ ನಲ್ಲಿ ಗ್ಯಾರಂಟಿಗಳ ಜೊತೆಗೂ ಅಭಿವೃದ್ಧಿಗೆ ಅಪಾರ ಅನುದಾನ ಇಡಲಾಗಿದ್ದು, ಈ ಸತ್ಯವನ್ನು ಚರ್ಚಿಸಲು ರಾಜ್ಯದ ಜನರ ಮುಂದೆ ಬಹಿರಂಗ ಚರ್ಚೆ ಮಾಡೋಣ ಎಂದು ಬಿಜೆಪಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸವಾಲೆಸೆದರು. ಅವರು ಇಂದು ಹೊಸಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ಸರ್ಕಾರದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶದಲ್ಲಿ ಭಾಗವಹಿಸಿ ಫಲಾನುಭವಿಗಳಿಗೆ ವಿವಿಧ ಯೋಜನೆಗಳ ಸವಲತ್ತುಗಳನ್ನು ನೀಡಿ ನಂತರ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.


ಪುಟ 2


**ಪ್ರಮುಖ ಸುದ್ದಿ**

### ಸಂಸಾರ ಹಾಗೂ ಸಮಾಜದ ಸಮತೋಲನದ ನಡುವೆ ಸಾಧನೆ: ಜಿಲ್ಲಾ ನ್ಯಾಯಧೀಶೆ

# ಮಹಿಳೆಯರದು ಬಹುಮುಖ ವ್ಯಕ್ತಿತ್ವ: ಕೆ.ಬಿ.ಗೀತಾ

» ಚಿತ್ರದುರ್ಗ

ಮಹಿಳೆಯರದು ಬಹುಮುಖ ವ್ಯಕ್ತಿತ್ವ. ಅಪಾರ ಪ್ರತಿಭೆ ಹೊಂದಿರುವ ಅವರು ಸಂಸಾರ ಹಾಗೂ ಸಮಾಜದ ಸಮತೋಲನದ ನಡುವೆ ಸಾಧನೆ ಮಾಡುತ್ತಿದ್ದಾರೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಕೆ.ಬಿ.ಗೀತಾ ಹೇಳಿದರು.

ಭಾನುವಾರ ಚಿತ್ರದುರ್ಗ ನಗರದ ಮಠದ ಕುರುಬರಹಟ್ಟಿಯ ಬಸವೇಶ್ವರ ವಿದ್ಯಾಸಂಸ್ಥೆ ಆವರಣದಲ್ಲಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಶ್ರೀ ಬಸವೇಶ್ವರ ವಿದ್ಯಾಸಂಸ್ಥೆ, ರೈನ್ ಟ್ರಸ್ಟ್, ಸ್ವಯಂ ಸೇವಾ ಸಂಸ್ಥೆ ಮತ್ತು ವಿವಿಧ ಮಹಿಳಾ ಸ್ವ–ಸಹಾಯ ಸಂಘಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಮತ್ತು ಮಹಿಳಾ ಸಾಧಕರಿಗೆ ಸನ್ಮಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.





ಸದಾ ಚಟುವಟಿಕೆಯಲ್ಲಿ ತೊಡಗಿಕೊಂಡಿರುವ ಮಹಿಳೆಯರು ಸಂಸಾರ, ಮಕ್ಕಳ ಶಿಕ್ಷಣ ಮತ್ತು ಸಾಮಾಜಿಕ ಒಡನಾಟವನ್ನು ಸಂಭಾಳಿಸಿಕೊಂಡು ಹೋಗುವ ಅನಿವಾರ್ಯತೆಗೆ ಸಿಲುಕಿದ್ದಾಳೆ. ಮಹಿಳೆಯರು ಆನೇಕ ಶೋಷಣೆಗಳ ವಿರುದ್ಧ ಪ್ರತಿಭಟಿಸುತ್ತಿದ್ದಾರೆ. ಇತ್ತೀಚಿಗೆ ಮಹಿಳೆಯರ ವಿರುದ್ಧದ ದೌರ್ಜನ್ಯ ಮತ್ತು ಶೋಷಣೆ ತಗ್ಗಿರುವುದು ಸಂತಸದ ವಿಚಾರ ಎಂದು ಹೇಳಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಸದಸ್ಯ ಕಾರ್ಯದರ್ಶಿ ಎಂ. ವಿಜಯ್ ಮಾತಾಡಿ, ಇಂದು ಮಹಿಳೆಯರು ಎಲ್ಲಾ ರಂಗಗಳಲ್ಲಿಯೂ ಸಾಧನೆ ಮಾಡಿದ್ದಾರೆ. ಪ್ರಮುಖ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸಿದ್ದಾರೆ. ಈ ಮಾತಿಗೆ ಈ ವೇದಿಕೆ ಸಾಕ್ಷಿಯಾಗಿದೆ ಎಂದರು.

ಅಪರಾಧಶಾಸ್ತ್ರದ ವಿಶ್ರಾಂತ ಪ್ರಾಧ್ಯಾಪಕ ಡಾ.ನಟರಾಜ್ ಮಾತನಾಡಿ, ಮಹಿಳೆಯರು ಹಾಗೂ ಮಕ್ಕಳ ನೆರವಾಗಿ ಅನೇಕ ಕಾನೂನುಗಳನ್ನು ರೂಪಿಸಲಾಗಿದೆ. ಈ ಕಾನೂನಿನ ನೆರವು ಪಡೆಯುವಹುದು. ಕುಂದು ಕೊರತೆಗಳನ್ನು ಪರಿಹರಿಸಿಕೊಳ್ಳಬಹುದು. ಮಹಿಳೆಯರು ಸಾಮಾಜಿಕ ಸ್ಥಾನಮಾನ ಭದ್ರಪಡಿಸಿಕೊಳ್ಳಬೇಕು. ಕಾನೂನಿನ ಅರಿವಿನ ಜೊತೆಗೆ ತಮ್ಮ ಹಕ್ಕುಗಳ ರಕ್ಷಣೆ ಮಾಡಿಕೊಳ್ಳಬೇಕು. ಅನ್ಯಾಯ ಹಾಗೂ ದೌರ್ಜನ್ಯದ ಸಂದರ್ಭಗಳನ್ನು ಧೈರ್ಯವಾಗಿ ಎದುರಿಸಬೇಕು ಎಂದರು.


ಪುಟ 2





# ನಮ್ಮದು ಜಾತಿ ಮಠವಲ್ಲ, ಜಾತ್ಯತೀತ ಮಠ

» ಚಿತ್ರದುರ್ಗ

ನಮ್ಮದು ಜಾತಿ ಮಠವಲ್ಲ, ಜಾತ್ಯತೀತವಾದ ಮಠವಾಗಿದೆ, ಇಲ್ಲಿಗೆ ಬರುವವರೆಲ್ಲರನ್ನು ಸಹಾ ನಾವು ಗೌರವದಿಂದ ಕಾಣುತ್ತೇವೆ ನಮ್ಮಲ್ಲಿ ಯಾವುದೇ ರೀತಿಯ ಜಾತಿಯ ಸೂಂಕು ಇಲ್ಲ ಇಲ್ಲಿ ಎಲ್ಲರೂ ಸಹಾ ಒಂದೇ ಎಂದು ಶ್ರೀ ಸದ್ಗುರು ಕಬೀರಾನಂದಾಶ್ರಮದ ಪೀಠಾಧ್ಯಕ್ಷ ಶ್ರೀ ಶಿವಲಿಂಗಾನಂದ ಸ್ವಾಮೀಜಿ ತಿಳಿಸಿದರು.

ಕಳೆದ 4 ರಿಂದ 9ವರಗೆ ನಗರದ ಶ್ರೀ ಕಬೀರಾನಂದಾಶ್ರಮದವತಿಯಿಂದ ನಡೆದ 94ನೇ ಮಹಾ ಶಿವರಾತ್ರಿ ಮಹೋತ್ಸವದ ಸಮಾರೋಪ ಸಮಾರಂಭದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಶ್ರೀಗಳು, ಇಂದಿನ ದಿನಮಾನದಲ್ಲಿ ನಾಡಿನಲ್ಲಿ ಜಾತಿಗೊಂದು ಮಠ ಇದೆ. ಆದರೆ ನಮ್ಮ ಆಶ್ರಮ ಯಾವುದೇ ಜಾತಿಗೆ ಸೇರಿಲ್ಲ ಇಲ್ಲ ಎಲ್ಲಾ ಜಾತಿಯವರು ಸಹಾ ಭಕ್ತರಾಗಿದ್ದಾರೆ. ಇಲ್ಲಿ ಎಲ್ಲವರು ಸಹಾ ನಮ್ಮವರೆ ಆಗಿದ್ದಾರೆ, ಇಲ್ಲಿ ಸಿದ್ದಾರೂಢ ಅಜ್ಜನವರ ಸೇವೆಯೊಂದೆ ಗುರಿಯಾಗಿದೆ. ನಮ್ಮಲ್ಲಿ ಅನ್ನದಾಸೋಹ, ಜ್ಞಾನದಾಸೋಹ ಹಾಗೂ ಧರ್ಮದಾಸೋಹ ಮಾಡಲಾಗುತ್ತಿದೆ. ಈ ಎಲ್ಲಾ ಕಾರ್ಯಕ್ರಮವೂ ಸಿದ್ದಾರೂಢ ಶ್ರೀಗಳ ತಪ್ಪಸ್ಸಿನ ಮಹಿಮೆಯಿಂದ ನಡೆಯುತ್ತಿದೆ ಎಂದು ಶ್ರೀಗಳು ತಿಳಿಸಿದರು.

ಈ ಆಶ್ರಮ ಗೋಶಾಲೆಯನ್ನು ನಡೆಸುವ ಸಲುವಾಗಿ ಬಂದವರಾಗಿದ್ದಾರೆ. ಸಿದ್ದರೂಢರು ಗೋಸಂಪತ್ತನ್ನು ರಕ್ಷಣೆ ಮಾಡಲು ಬಂದವರಾಗಿದ್ದರು, ಇಲ್ಲಿ ಮಠವನ್ನು ನಿರ್ಮಾಣ ಮಾಡಬೇಕೆಂದು ಬಂದವರಲ್ಲ, ಇಲ್ಲಿಗೆ ಬರುವವರನ್ನು ನಿಮ್ಮ ಜಾತಿ ಯಾವುದೆಂದು ಕೇಳಿದವರಲ್ಲ, ಇಲ್ಲಿ ಎಲ್ಲವರು ಸಹಾ ನಮ್ಮವರೆ ಆಗಿದ್ದಾರೆ. ಮಕ್ಕಳಿಗೆ ಅಕ್ಷರ ಜ್ಞಾನವನ್ನು ನೀಡುವ ಉದ್ದೇಶದಿಂದ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪನೆ ಮಾಡಲಾಗಿದೆ. ಇಲ್ಲಿ ವ್ಯವಹಾರಿಕವಾಗಿ ಏನು ಇಲ್ಲ ಎಲ್ಲವನ್ನು ಸಹಾ ಉತ್ತಮ ದೃಷ್ಟಿಯಿಂದ ಮಾಡಲಾಗುತ್ತಿದೆ. ಶಿಕ್ಷಣದ ಜೊತೆಗೆ ಮಕ್ಕಳಿಗೆ ಸಂಸ್ಕಾರವನ್ನು ಸಹಾ ಕಲಿಸಲಾಗುತ್ತಿದೆ. ನಮ್ಮ ದೈನಂದಿನ ಚಟುವಟಿಕೆಯಲ್ಲಿ ವನಸ್ಸನ್ನು ಕ್ರೋಢಿಕರಿಸಿಕೊಂಡು ವಿವಿಧ ರೀತಿಯಲ್ಲಿ ಚಿಂತನೆ ಮಾಡುವುದನ್ನು ನಿಲ್ಲಿಸಬೇಕಿದೆ ಎಂದು ಶ್ರೀಗಳು ಭಕ್ತರಿಗೆ ಕರೆ ನೀಡಿದರು.

ರಾಜ್ಯ ವೈಜ್ಞಾನಿಕ ಸಂಶೋಧನೆ ಪರಿಷತ್‌ನ ಜಿಲ್ಲಾಧ್ಯಕ್ಷ ನಾಗರಾಜ್ ಸಂಗಂ ಮಾತನಾಡಿ, ಇಂದಿನ ದಿನಮಾನದಲ್ಲಿ ಮನೆಯಲ್ಲಿ ತಾಯಂದಿರು ತಮ್ಮ ಮಕ್ಕಳ ಬಗ್ಗೆ ಹೆಚ್ಚಿನ ಗಮನವನ್ನು ನೀಡಿ ಅವರು ಅಬ್ಯಾಸವನ್ನು ಮಾಡುವಾಗ ನೀವು ಟಿ.ವಿ.ಯನ್ನು ನೋಡುವ ಕಾರ್ಯದಲ್ಲಿ ತೊಡಗಬೇಡಿ ಇದರಿಂದ ಮಕ್ಕಳಿಎಗ ತೊಂದರೆಯಾಗಲಿದೆ ನೀವು ಸಹಾ ಅವರ ಜೊತೆಯಲ್ಲಿ ಓದುವ ಹವ್ಯಾಸವನ್ನು ಬೆಳಸಿಕೊಳ್ಳಿ ಇದರಿಂದ ಅವರಿಗೂ ಸಹಾ ಸ್ಪೂರ್ತಿ ಬಂದಂತೆ ಆಗುತ್ತದೆ. ಅಲ್ಲದೆ ಮನೆಯಲ್ಲಿನ ಹಿರಿಯರಿಗೆ ಗೌರವವನ್ನು ನೀಡಿ ಅವರ ಮಾತನ್ನು ಕಡೆಗಾಣಿಸಬೇಡಿ ಮನ್ನಣೆಯನ್ನು ನೀಡಿ ಎಂದರು.

ಇಂದಿನ ದಿನಮಾನದಲ್ಲಿ ವೃದ್ದಾಶ್ರಮಗಳ ನಿರ್ಮಾಣ ಹೆಚ್ಚಾಗುತ್ತಿದೆ ಇದು ಸಮಾಜಕ್ಕೆ ಅಂತಕಕಾರಿಯಾದ ವಿಷಯವಾಗಿದೆ. ಮನೆಯಲ್ಲಿ ಆಗುವ ಸಣ್ಣ-ಪುಟ್ಟ ವಿಚಾರಗಳಿಗೆಲ್ಲ ಗಲಾಟೆಯನ್ನು ಮಾಡಿಕೊಳ್ಳದೇ ಹಿರಿಯನ್ನು ಸಹಾ ಗೌರದಿಂದ ಕಾಣುವ ಕಾರ್ಯವನ್ನು ಮಾಡಿ ಇದರಿಂದ ಅವರಿಗೂ ಸಹಾ ಸಂತೋಷವಾಗುತ್ತದೆಚಿಕ್ಕವರಿದ್ದಾಗಅವರು ನಿಮ್ಮನ್ನು ಸಾಕಿದ್ದಾರೆ ಈ ಹಿನ್ನಲೆಯಲ್ಲಿ ಅವರನ್ನು ಮನೆಯಿಂದ ಹೂರಗೆ ಕಳುಹಿಸದೇ ನಿಮ್ಮ ಜೊತೆಯಲ್ಲಿಯೇ ಇಟ್ಟುಕೊಳ್ಳಿ ಎಂದು ನಾಗರಾಜ್ ಸಂಗಂ ಸಲಹೆ ನೀಡಿದರು.

ಇಲಕಲ್ಲನ ಅವದೂರ ಮಠದ ಮಾತೋಶ್ರೀ ಶರಣಮ್ಮತಾಯಿ, ಕೃಷ್ಣಾನಂದ ಶ್ರೀಗಳು, 94ನೇ ಶಿವರಾತ್ರಿ ಮಹೋತ್ಸವ ಸಮಿತಿಯ ಉಪಾಧ್ಯಕ್ಷರಾದ ಸಿದ್ದವ್ವನಹಳ್ಳಿ ಪರಮೇಶ್, ಸದಸ್ಯರಾದ ಓಂಕಾರ್, ಉತ್ಸವ ಸಮಿತಿ ಗೋಪಾಲಸ್ವಾಮಿ ನಾಯ್ಕ್,ನಗರಸಭಾ ಸದಸ್ಯರಾದ ವೆಂಕಟೇಶ್ ಭಾಗವಹಿಸಿದ್ದರು. ಸುಮನ ಪ್ರಾರ್ಥಿಸಿದರೆ ಈರಣ್ಣ ಸ್ವಾಗತಿಸಿದರು ಮುರುಗೇಶ್ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ಶಿವಲಿಂಗಾನಂದ ಶ್ರೀಗಳಿಗೆ ಕೀರೀಟ ಪೂಜೆ

» ಚಿತ್ರದುರ್ಗ

ಶ್ರೀ ಕಬೀರಾನಂದಾಶ್ರಮದ ವತಿಯಿಂದ ನಡೆದ ಮಹಾ ಶಿವರಾತ್ರಿ ಮಹೋತ್ಸವದಲ್ಲಿ ಶಿವಲಿಂಗಾನಂದ ಶ್ರೀಗಳಿಗೆ ಕಾರ್ಯಕ್ರಮ ನಂತರ ನಡೆಯುವ ಕಿರೀಟ ಪೂಜೆ ವಿಶೇಷವಾಗಿದೆ, ಪ್ರತಿ ಸಭಾ ಕಾರ್ಯಕ್ರಮ ಮುಗಿದ ನಂತರ ಕಬೀರಾನಂದಾಶ್ರಮನದ ಆವರಣದಲ್ಲಿ ಶ್ರೀಗಳಿಗೆ ವಿವಿಧ ರೀತಿಯ ಹೂಗಳಿಂದ ಅಲಂಕಾರವನ್ನು ಮಾಡುವುದರ ಮೂಲಕ ಕೀರೀಟ ಪೂಜೆಯನ್ನು ನೇರವೇರಿಸಲಾಗುತ್ತದೆ.

ನಿನ್ನೆ ರಾತ್ರಿಯೂ ಸಹಾ ಮಹಾ ಶಿವರಾತ್ರಿ ಮಹೋತ್ಸವದ ಸಮಾರೋಪ ಸಮಾರಂಭ ಮುಗಿದ ನಂತರ ಶ್ರೀಗಳಿಗೆ ಕೀರೀಟ ಪೂಜೆಯನ್ನು ನೇರವೇರಿಸಲಾಯಿತು.

ಬಿಳಿ ಮತ್ತು ಹಳದಿ ಸಾವಂತಿಗೆ ಹೂಗಳಿಂದ ಆಲಂಕಾರವನ್ನು



ಮಾಡಿದ್ದು,

ಇದ್ದಲ್ಲದೆ ಸುಗಂಧರಾಜ ಚಂಡಹೂನಿಂದ ನಿರ್ಮಾಣ ಮಾಡಿದ ಬೃಹತಾದ ಹಾರವನ್ನು ಹಾಕುವುದರ ಮೂಲಕ ಅಕ್ಕ-ಪಕ್ಕದಲ್ಲಿ ವಿವಿಧ ಹೂಗಳಿಂದ ತಯಾರು ಮಾಡಲಾದ ಹೂವಿನ ದಂಡೆಯನ್ನು ಸಹಾ ಹಾಕಲಾಗಿತ್ತು. ಶ್ರೀಗಳಿಗೆ ವಿವಿಧ ರೀತಿಯ ಆಭರಣಗಳನ್ನು ಹಾಕಲಾಗುತ್ತು ತೆಲೆಯ ಮೇಲೆ ಕೀರೀಟವನ್ನು ಇರಿಸಿದ್ದು ನೋಡುಗರಿಗೆ ವಿಶೇಷವನ್ನುಂಟು ಮಾಡಿತ್ತು.

ವಿಶೇಷ ರೀತಿಯಲ್ಲಿ ಆಲಂಕಾರ ಮಾಡಿದ ಶ್ರೀಗಳಿಗೆ ಭಕ್ತ ಸಮೂಹ ವಿವಿಧ ರೀತಿಯ ದೀಪಾರಾಧನೆಯನ್ನು ಮಾಡುವುದರ ಮೂಲಕ ತಮ್ಮ ಭಕ್ತಿಯನ್ನು ಸಮರ್ಪಿಸಿದರು. ಇದೇ ಸಮಯದಲ್ಲಿ ಭಕ್ತಿಗೀತೆಗಳ ಗಾಯನ ಮಾಡುವುದರ ಮೂಲಕ ಶ್ರೀಗಳಿಗೆ ಅರ್ಪಣೆ ಮಾಡಿದರು.

## ಫಾಸ್ಟ್ ನ್ಯೂಸ್

### ಮಹಿಳೆಯರದು ಬಹುಮುಖ ವ್ಯಕ್ತಿತ್ವ: ಕೆ.ಬಿ.ಗೀತಾ

» ಮೊದಲ ಪುಟದಿಂದ

ಬಸವೇಶ್ವರ ವಿದ್ಯಾಸಂಸ್ಥೆಯ ಅಧ್ಯಕ್ಷೆ ಪ್ರಭಾವತಿ ಶಂಕರಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೇಸ್ವಾಮಿ, ಸಾಮಾಜಿಕ ವಲಯ ಅರಣ್ಯಾಧಿಕಾರಿ ಐ.ಬಿ.ಅಕ್ಷತಾ, ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತುದಾರರಾದ ಪಿ.ಜಿ.ಅನಿತಾ ಲಕ್ಷ್ಮಿ ಆಚಾರ್ಯ, ಕೋಡೇನಹಟ್ಟಿ ಟಿ. ಸುಮ, ರೈನ್ ಟ್ರ□□□□ನ ಅಧ್ಯಕ್ಷ ಕಸವನಹಳ್ಳಿ ರಮೇಶ್, ಪರಿಸರವಾದಿ ಪಿ.ವಿ.ಮಲ್ಲಿಕಾರ್ಜುನಪ್ಪ, ಸಮಾಜ ಸೇವಕರಾದ ಮಾರಗಟ್ಟ ತಿಪ್ಪೇಸ್ವಾಮಿ, ಕಿರಣ್, ಶಂಕರಪ್ಪ, ವಿವಿಧ ಮಹಿಳಾ ಸಂಘದ ಮಹಿಳೆಯರು, ಮಕ್ಕಳು ಭಾಗವಹಿಸಿದ್ದರು. ಎಂ.ಮಂಜುನಾಥ್ ಕಳ್ಳಿಹಟ್ಟಿ ಇವರು ಪ್ರಾಸ್ತಾವಿಕ ಮಾತನಾಡಿದರು. ವಿ.ತಿಪ್ಪೇಸ್ವಾಮಿ ಮಲ್ಲೂರಹಟ್ಟಿ ಕಾರ್ಯಕ್ರಮ ನಿರೂಪಿಸಿದರು. ಕುಮಾರಿ ಅರುಣಾ ಪ್ರಾರ್ಥನೆ ಮಾಡಿದರು.

### ನವ ಜೀವನ ಸಮಿತಿ ಪೋಷಕರ ತರಬೇತಿ ಕಾರ್ಯಾಗಾರಕ್ಕೆ ಚಾಲನೆ

» ಚಿತ್ರದುರ್ಗ



ಅಖಿಲ ಕರ್ನಾಟಕ ಜಿಲ್ಲಾ ಜನಜಾಗೃತಿ ವೇದಿಕೆ ಟ್ರಸ್ಟ್ ವತಿಯಿಂದ ಮೆದೇಹಳ್ಳಿ ರಸ್ತೆಯಲ್ಲಿರುವ ಆದಿಶೇಷ ರೋಟರಿ ಭವನದಲ್ಲಿ ನವ ಜೀವನ ಸಮಿತಿ ಪೋಷಕರಿಗೆ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಜನಜಾಗೃತಿ ವೇದಿಕೆ ಉಪಾಧ್ಯಕ್ಷ ಕೆ.ಆರ್.ಮಂಜುನಾಥ್, ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಶ್ರೀಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹಗಡೆರವರು ಅನೇಕ ಯೋಜನೆಗಳನ್ನು ಹಮ್ಮಿಕೊಂಡಿದ್ದಾರೆ. ಕುಡಿತದ ಚಟದಿಂದ ಹೊರ ತಂದವರ ಮೇಲೆ ನಿಗಾ ಇಡಲು ಐದು ಜನರ ತಂಡ ರಚಿಸಿದ್ದು, ಪ್ರತಿ ಸೋಮವಾರ ಅವರ ಬಳಿ ಹೋಗಿ ಮದ್ಯಪಾನ ವ್ಯಸನದಿಂದ ಹೊರ ಬಂದಿದ್ದಾರೋ ಇಲ್ಲವೋ ಎನ್ನುವುದನ್ನು ಪರಿಶೀಲಿಸುವುದು ಕಾರ್ಯಾಗಾರದ ಉದ್ದೇಶ ಎಂದು ಹೇಳಿದರು. ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆ ಪ್ರಾದೇಶಿಕ ನಿರ್ದೇಶಕಿ ಶ್ರೀಮತಿ ಬಿ.ಗೀತ, ಜನಜಾಗೃತಿ ವೇದಿಕೆ ಪ್ರಾದೇಶಿಕ ನಿರ್ದೇಶಕ ವಿವೇಕ ವಿ.ಪಾಯಸ್ ಜಿಲ್ಲಾ ನಿರ್ದೇಶಕ ದಿನೇಶ್ ಪೂಜಾರಿ, ಕ್ಷೇತ್ರ ಯೋಜನಾಧಿಕಾರಿಗಳು ಮತ್ತು ಪ್ರಾದೇಶಿಕ ಕಚೇರಿಯ ಯೋಜನಾಧಿಕಾರಿ, ಜನಜಾಗೃತಿ ಮೇಲ್ವಿಚಾರಕರು ಕಾರ್ಯಾಗಾರದಲ್ಲಿ ಉಪಸ್ಥಿತರಿದ್ದರು.

### ಸಾರ್ವಜನಿಕ ಹಿಂದೂ ರುದ್ರಭೂಮಿ ಸೇವಾ ಸಮಿತಿ ಟ್ರಸ್ಟ್‌ನಿಂದ ಅನ್ನಸಂತರ್ಪಣೆ



» ಚಿತ್ರದುರ್ಗ

ಜೋಗಿಮಟ್ಟಿ ರಸ್ತೆಯಲ್ಲಿರುವ ಹಿಂದೂ ರುದ್ರಭೂಮಿಯಲ್ಲಿ ಮೂರನೆ ವರ್ಷದ ಮಹಾಶಿವರಾತ್ರಿ ಮಹೋತ್ಸವ ಹಾಗೂ 31 ಅಡಿ ಎತ್ತರದ ಧ್ಯಾನ ಮಗ್ನ ಶಿವರ ಪ್ರತಿಮೆ ಲೋಕಾರ್ಪಣೆಗೊಂಡ ಪ್ರಯುಕ್ತ ಮುಕ್ತಿನಾಥೇಶ್ವರಸ್ವಾಮಿ ದೇವಸ್ಥಾನ ಸಮಿತಿ ಮತ್ತು ಸಾರ್ವಜನಿಕ ಹಿಂದೂ ರುದ್ರಭೂಮಿ ಸೇವಾ ಸಮಿತಿ ಟ್ರಸ್ಟ್ ವತಿಯಿಂದ ಶನಿವಾರ ಮುಕ್ತಿನಾಥೇಶ್ವರಸ್ವಾಮಿ ದೇವಸ್ಥಾನದ ಸಮೀಪ ಅನ್ನಸಂತರ್ಪಣೆಯನ್ನು ಏರ್ಪಡಿಸಲಾಗಿತ್ತು.ನೂರಾರು ಭಕ್ತರು ಅನ್ನಸಂತರ್ಪಣೆಯಲ್ಲಿ ಪ್ರಸಾದ ಸವಿದರು. ಮುಕ್ತಿನಾಥೇಶ್ವರಸ್ವಾಮಿ ದೇವಸ್ಥಾನ ಸಮಿತಿ ಮತ್ತು ಸಾರ್ವಜನಿಕ ಹಿಂದೂ ರುದ್ರಭೂಮಿ ಸೇವಾ ಸಮಿತಿ ಟ್ರಸ್ಟ್‌ನ ಗೌರವಾಧ್ಯಕ್ಷ ಎಸ್.ಗುರುಮೂರ್ತಿ, ಅಧ್ಯಕ್ಷ ಆರ್.ನಾಗರಾಜ್, ಖಜಾಂಚಿ ಎಂ.ಸೋಮಪ್ಪ, ಟ್ರಸ್ಟಿಗಳಾದ ಡಿ.ತಿಮ್ಮಣ್ಣ, ಟಿ.ಎಲ್.ಮಂಜುನಾಥ್, ಹೆಚ್.ಶ್ರೀನಿವಾಸ್ ಈ ಸಂದರ್ಭದಲ್ಲಿ ಹಾಜರಿದ್ದರು.

### ಕಾಪಿಯರ್ ಯಂತ್ರ ಖರೀದಿಗೆ ದರಪಟ್ಟಿ ಆಹ್ವಾನ

» ದಾವಣಗೆರೆ

ದಾವಣಗೆರೆ ನ್ಯಾಯಾಲಯ ಘಟದಲ್ಲಿ ಒಂದು ಕಾಪಿಯರ್ ಯಂತ್ರವನ್ನು ಅಳವಡಿಸಲು ಹೊರಗುತ್ತಿಗೆ ಆಧಾರ ಮೇಲೆ ಅರ್ಜಿ ಆಹ್ವಾನಿಸಲಾಗಿದೆ. ಮಾರ್ಚ್ 11 ರಂದು ಮಧ್ಯಾಹ್ನ 2 ಗಂಟೆಗೆ ನಿರೀಕ್ಷಿತ ಬಿಡ್‌ದಾರರಿಗೆ ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದೆ. ಮಾರ್ಚ್ 30 ಮಧ್ಯಾಹ್ನ 2 ಗಂಟೆಯ ಒಳಗೆ ಕೋಟೇಶನ್ ಸಲ್ಲಿಸಬಹುದು.

---

ಜಾನುವಾರುಗಳು ಹಾಗೂ ಮೇವಿನ ವಿತರಣೆ ಬಗ್ಗೆ ಪರಿಶೀಲನೆ

## ಹಿರೇಕೆರೆ ಕಾವಲು ಗೋಶಾಲೆಗೆ ಜಿಲ್ಲಾಧಿಕಾರಿ ಭೇಟಿ

» ಚಳ್ಳಕೆರೆ

ಗೋಶಾಲೆಯಲ್ಲಿ ಹಾಲಿ ಇರುವ ಜಾನುವಾರುಗಳಿಗೆ ದಿನಕ್ಕೆ ಕನಿಷ್ಟ ಎರಡು ಬಾರಿಯಾದರೂ ಮೇವು ನೀಡಬೇಕು. ಕೇವಲ ಭತ್ತದ ಹುಲ್ಲನ್ನು ಜಾನುವಾರುಗಳು ತಿಂದುಬದುಕಲು ಕಷ್ಟವಾಗುತ್ತದೆ. ಜೊತೆಗೆ ಮೆಕ್ಕೆಜೋಳದ ಸಪ್ಪೆಯನ್ನು ನೀಡಿದರೆ ದನಗಳು ಇನ್ನೂ ದಷ್ಟಮುಷ್ಠ, ಆರೋಗ್ಯವಾಗಿರುತ್ತವೆ ಎಂದು ಜಿಲ್ಲಾಧಿಕಾರಿ ವೆಂಕಟೇಶ್ ತಿಳಿಸಿದರು.

ಅವರು, ಭಾನುವಾರ ನಾಯಕನಹಟ್ಟಿಹೋಬಳಿಯ ಹಿರೇಕೆರೆಕಾವಲು ಗೋಶಾಲೆಗೆ ಭೇಟಿ ನೀಡಿ ದಾಸ್ತಾನಿರುವ ಮೇವು, ನೀರು, ಜಾನುವಾರುಗಳ ಆರೋಗ್ಯ ಕುರಿತು ಮಾಹಿತಿ ಪಡೆದರು. ಪ್ರತಿನಿತ್ಯ ಈ ಗೋಶಾಲೆಯಲ್ಲಿ 650ಕ್ಕೂ ಹೆಚ್ಚು ರಾಸುಗಳಿದ್ದು, ತಾಲ್ಲೂಕಿನಲ್ಲೇ ಅತಿಹೆಚ್ಚು ಜಾನುವಾರುಗಳನ್ನು ಹೊಂದಿರುವ ಗೋಶಾಲೆಯಾಗಿದೆ. ಜಾನುವಾರುಗಳಿಗೆ ಮೇವು ನೀಡುವ ಸಂದರ್ಭದಲ್ಲಿ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗ ಎಚ್ಚರಿಕೆ ವಹಿಸಬೇಕು. ಯಾವುದೇ ಕಾರಣಕ್ಕೂ ಜಾನುವಾರುಗಳು ಮೇವು ತಿನ್ನುವ ತನಕ ಅದರ ಬಗ್ಗೆ ಗಮನಹರಿಸಿ. ದಂಡವಾಗದಂತೆ ಎಚ್ಚರಿಕೆ ವಹಿಸಬೇಕು, ಜಾನುವಾರುಗಳು ಹೆಚ್ಚಿದ್ದಲ್ಲಿ ಹೆಚ್ಚಿನ ಮೇವು ಸರಬರಾಜು ಮಾಡಲಾಗುವುದು ಎಂದರು.



ಕಂದಾಯಾಧಿಕಾರಿ ಚೇತನ್‌ಕುಮಾರ್ ಮಾಹಿತಿ ನೀಡಿ, ಪ್ರಸ್ತುತ ಈ ಗೋಶಾಲೆಯಲ್ಲಿ ಏಳು ಕುಡಿಯುವ ನೀರಿನ ತೊಟ್ಟಿಗಳಿವೆ, ಬೆಳಗ್ಗೆ ಸಂಜೆ ವೇಳೆ ತೊಟ್ಟಿಯಲ್ಲಿ ಶುದ್ದವಾದ ನೀರು ದಾಸ್ತಾನು ಮಾಡಲಾಗುತ್ತದೆ. ಎಲ್ಲಾ ಜಾನುವಾರುಗಳು ನೀರು ಕುಡಿಯುವಂತೆ ವ್ಯವಸ್ಥೆ ಮಾಡಿದೆ. ಪಶುವೈದ್ಯಾಧಿಕಾರಿ ಆಗಾಗೆ ಭೇಟಿ ನೀಡಿ ಅವುಗಳ ಆರೋಗ್ಯ ತಪಾಸಣೆ ನಡೆಸುವರು ಎಂಧರು. ತಹಶೀಲ್ಧಾರ್ ರೇಹಾನ್‌ಪಾಷ, ಗ್ರಾಮ ಲೆಕ್ಕಿಗ ಹರೀಶ್ ಸ್ಥಳದಲ್ಲಿ ಉಪಸ್ಥಿತರಿದ್ದರು. ಗೋಶಾಲೆಗೆ ಭೇಟಿ ನೀಡುವ ಮುನ್ನ ಜಿಲ್ಲಾಧಿಕಾರಿ ವೆಂಕಟೇಶ್ ನಾಯಕನಹಟ್ಟಿ ಶ್ರೀಗುರುತಿಪ್ಪೇರುದ್ರಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದರು. ಮಾ.26ರಂದು ನಡೆಯುವ ಜಾತ್ರೆಯ ಪೂರ್ವಸಿದ್ದತೆಗಳನ್ನು ಪರಿಶೀಲನೆ ನಡೆಸಿದರು. ದೇವಸ್ಥಾನದ ಕಾರ್ಯನಿರ್ವಾಹಣಾಧಿಕಾರಿ ಗಂಗಾಧರ, ಪ್ರಸನ್ನಕುಮಾರ್ ಮೊದಲಾದವರು ಉಪಸ್ಥಿತರಿದ್ದರು.

## ಹಿರೇಹಳ್ಳಿ ಶ್ರೀಚಿಂತಾಮಣೇಶ್ವರ ಸ್ವಾಮಿ ರಥೋತ್ಸವ ಯಶಸ್ವಿ



» ಚಳ್ಳಕೆರೆ

ತಾಲ್ಲೂಕಿನ ಹಿರೇಹಳ್ಳಿ ಗ್ರಾಮದ ಶ್ರೀಚಿಂತಾಮಣೇಶ್ವರಸ್ವಾಮಿಯ ರಥೋತ್ಸವ ಶನಿವಾರ ವಿಜೃಂಭಣೆಯಿಂದ ನಡೆಯಿತು. ಪ್ರತಿ ವರ್ಷ ಶಿವರಾತ್ರಿ ಹಬ್ಬದ ಮಾರನೆ ದಿನ ಶ್ರೀಸ್ವಾಮಿಯ ರಥೋತ್ಸವ ನಡೆಯುತ್ತಾ ಬಂದಿದ್ದು, ಸುತ್ತಮುತ್ತಲ ಸಾವಿರಾರು ಭಕ್ತರು ಆಗಮಿಸಿ ಸ್ವಾಮಿಯ ದರ್ಶನ ಪಡೆದರು. ಗ್ರಾಮ ಪಂಚಾಯಿತಿ ಅಧ್ಯಕ್ಷ ಜಿ.ರಾಜಣ್ಣ ಮಾತನಾಡಿ, ಪ್ರತಿವರ್ಷವೂ ಶ್ರೀಸ್ವಾಮಿಯ ಜಾತ್ರೆಯನ್ನು ಭಕ್ತಾಧಿಗಳ ಸಹಕಾರದಿಂದ ಯಶಸ್ವಿಯಾಗಿ ನಡೆಸಲಾಗುತ್ತಿದೆ. ಆದರೆ, ಇತ್ತೀಚಿನ ದಿನಗಳಲ್ಲಿ ಸಕಾಲಕ್ಕೆ ಮಳೆಬಾರದೆ ಎಲ್ಲರೂ ತೊಂದರೆ ಅನುಭವಿಸುವಂತಾಗಿದೆ. ಈ ನಿಟ್ಟಿನಲ್ಲಿ ಇಂದು ಶ್ರೀಸ್ವಾಮಿಯ ಜಾತ್ರೆಗೆ ಆಗಮಿಸಿದ ಎಲ್ಲಾ ಭಕ್ತರಪರವಾಗಿ ಉತ್ತಮ ಮಳೆ, ಬೆಳೆಗಾಗಿ ಪ್ರಾರ್ಥಿಸಿರುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಮಾಜಿ ಅಧ್ಯಕ್ಷೆ ಮಂಜುಳಮ್ಮ, ರೈತ ಮುಖಂಡರಾದ ಕೆ.ಟಿ.ನಿಜಲಿಂಗಪ್ಪ, ಪ್ರವೀಣ್, ಗ್ರಾಮ ಪಂಚಾಯಿತಿ ಸದಸ್ಯ ಎಸ್. ರಾಜಣ್ಣ, ಬಸವರಾಜು ಮುಂತಾದವರು ಉಪಸ್ಥಿತರಿದ್ದರು.

---

**ಪ್ರಮುಖ ಸುದ್ದಿ**

ಗ್ಯಾರಂಟಿಗಳ ಹೊರತಾಗಿ ಅಭಿವೃದ್ಧಿಗೆ ಬಜೆಟ್ ನಲ್ಲಿ ತೆಗೆದಿಟ್ಟ ಅನುದಾನದ ಲೆಕ್ಕ ಮುಂದಿಟ್ಟ ಸಿಎಂ

# ಬಜೆಟ್‌ನಲ್ಲಿ ಅಭಿವೃದ್ಧಿಗೆ ಮೀಸಲಿಟ್ಟ ಹಣ 1.20 ಲಕ್ಷ ಕೋಟಿ

» ಮೊದಲ ಪುಟದಿಂದ

ಗ್ಯಾರಂಟಿಗಳನ್ನು ಜಾರಿ ಮಾಡಿ ಅಭಿವೃದ್ಧಿ ಕಾರ್ಯಗಳಿಗೆ ಖಜಾನೆಯಲ್ಲಿ ದುಡ್ಡು ಉಳಿದಿಲ್ಲ ಎಂದು ವಿರೋಧ ಪಕ್ಷಗಳು ನಿರಂತರವಾಗಿ ಸುಳ್ಳು ಸೃಷ್ಟಿಸುತ್ತಿದ್ದು, ಜನರಿಗೆ ತಪ್ಪು ಮಾಹಿತಿ ನೀಡುತ್ತಿದ್ದಾರೆ. ಆದರೆ ಇಂದು ಈ ಕ್ಷೇತ್ರದಲ್ಲಿ 600 ಕೋಟಿ ರೂ.ಗಳ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗಿದೆ. ಅಭಿವೃದ್ಧಿಗೆ ದುಡ್ಡೇ ಇಲ್ಲ ಎಂದು ಹೇಳುತ್ತಿರುವ ಬಿಜೆಪಿಯವರಿಗೆ ಸುಳ್ಳೇ ಮನೆದೇವರು. ನಾವು ಅಧಿಕಾರಕ್ಕೆ ಬಂದು 9 ತಿಂಗಳ ಒಳಗೆ 5 ಗ್ಯಾರಂಟಿಗಳನ್ನು ಜಾರಿ ಮಾಡಿದ್ದು,36 ಸಾವಿರ ಕೋಟಿ ವೆಚ್ಚವಾಗಿದ್ದರೂ, ನಮ್ಮ ಖಜಾನೆ ಖಾಲಿಯಾಗಿಲ್ಲ. ಬಜೆಟ್ ನಲ್ಲಿ ಅಭಿವೃದ್ಧಿಗೆ 1.20 ಲಕ್ಷ ಕೋಟಿ ಪಾಲು ಇಟ್ಟಿದ್ದೇವೆ. 2024-25 ಕ್ಕೆ 3.71 ಲಕ್ಷ ಕೋಟಿ ರೂ.ಗಳ ಬಜೆಟ್ ನ್ನು ಮಂಡಿಸಿದ್ದೇನೆ. ಬೊಮ್ಮಾಯಿ ಯವರ ಕಾಲದ ಬಜೆಟ್ ಗಿಂತ ನಮ್ಮ ಬಜೆಟ್ ನ ಗಾತ್ರ ದೊಡ್ಡದು. ಇದು ರಾಜ್ಯದ ಅಭಿವೃದ್ಧಿಯ ಗುರುತಲ್ಲವೇ ಎಂದು ಸಿಎಂ ಪ್ರಶ್ನಿಸಿದರು.

**ಗ್ಯಾರಂಟಿಗಳ ಮೂಲಕ ಜನರಿಗೆ ಆರ್ಥಿಕ ಬಲ:** ರಾಜ್ಯದ ಜನರ ಕೈಗಳಿಗೆ ಮಧ್ಯವರ್ತಿಗಳ ಕಾಟವಿಲ್ಲದೇ ಹಣ ನೀಡುವ ಕೆಲಸವನ್ನು ಮಾಡಲಾಗುತ್ತಿದೆ. ಹೊಸಕೋಟೆ ವಿಧಾನಸಭಾ ಕ್ಷೇತ್ರವೊಂದರಲ್ಲೇ ಗೃಹಲಕ್ಷ್ಮಿ ಯೋಜನೆಯಡಿ52ಸಾವಿರಮಹಿಳೆಯರಿಗೆ 2000 ರೂ. ಹಣ ನೀಡಲಾಗುತ್ತಿದೆ. ಶಕ್ತಿ ಹಾಗೂ ಗೃಹಜ್ಯೋತಿ, ಅನ್ನಭಾಗ್ಯ, ಯುವನಿಧಿ ಯೋಜನೆಗಳ ಹಣದಿಂದ ಜನರಿಗೆ ಉಳಿತಾಯವಾಗುತ್ತಿದೆ. ಈ ಎಲ್ಲ



ಯೋಜನೆಗಳಿಂದ ಪ್ರತಿ ಕುಟುಂಬಕ್ಕೆ ತಲಾ 4 ರಿಂದ 5 ಸಾವಿರ ರೂ. ದೊರೆಯುತ್ತಿದೆ ಎಂದರು.

ಗ್ಯಾರಂಟಿಗಳ ಮೂಲಕ ಈ ವರ್ಷ 36 ಸಾವಿರ ಕೋಟಿ , ಮುಂದಿನ ವರ್ಷ 52 ಸಾವಿರ ಕೋಟಿ ರೂಪಾಯಿ ಜನರ ಜೇಬಿಗೆ ನೇರವಾಗಿ ಹೋಗುತ್ತಿದ್ದು, ಅವರ ಆರ್ಥಿಕ ಶಕ್ತಿ ವೃದ್ಧಿಯಾಗುತ್ತದೆ. ಶಕ್ತಿ ಯೋಜನೆಯನ್ನು ಪ್ರಶಂಶಿಸಿದ ಧರ್ಮಸ್ಥಳ ಕ್ಷೇತ್ರ ಧರ್ಮಾಧಿಕಾರಿ ಶ್ರೀ ಹೆಗಡೆಯವರು ಪತ್ರವನ್ನು ಉಲ್ಲೇಖಿಸಿದರು.

**38 ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ 150 ಕೋಟಿ ರೂ.ಗಳನ್ನು ವೆಚ್ಚ:** 2008-2013ರವರೆಗೆ ಬಿಜೆಪಿಯವರ ಸರ್ಕಾರವಿತ್ತು. ಆಗ ತ್ಯಾಜ್ಯ ನೀರನ್ನು ಸಂಸ್ಕರಿಸಿ ಕೆರೆಗಳಿಗೆ ನೀರು ತುಂಬುವ ಯೋಜನೆಗಳ ಬಗ್ಗೆ ಗಮನಹರಿಸಲಿಲ್ಲ. ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾ , ತುಮಕೂರು, ಆನೇಕಲ್ ಕ್ಷೇತ್ರಗಳಲ್ಲಿ ಕೆರೆಗಳು ಬತ್ತಿಹೋಗಿದ್ದು, ಅವುಗಳನ್ನು ತುಂಬಿಸುವ ಕೆಸಿ ವ್ಯಾಲಿ, ಹೆಚ್ ಸಿ ವ್ಯಾಲಿ, ಅನೇಕಲ್ , ಹೊಸಕೇಟೆ, ಕಾಡುಬೀಜನಹಳ್ಳಿ ಯೋಜನೆಗಳ ಮೂಲಕ ಕೆರೆ ತುಂಬಿಸಲಾಯಿತು ಎಂದರು.

ನೆಲಮಂಗಲ, ತುಮಕೂರು ಜಿಲ್ಲೆ ಗಳಿಗೆ ನೀರು ತುಂಬಿಸುವ ಕೆಲಸ ವನ್ನು ಮಾಡಿದೆವು. ಇಂದು ಉದ್ಘಾಟನೆಯಾದ 38 ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ 150 ಕೋಟಿ ರೂ.ಗಳನ್ನು ವೆಚ್ಚ ಮಾಡಲಾಗಿದೆ. ಕೆ.ಸಿ ವ್ಯಾಲಿ, ಹೆಚ್. ಎನ್ ವ್ಯಾಲಿ, ಆನೇಕಲ್, ಹೊಸಕೋಟೆ ಯೋಜನೆ ಎಲ್ಲಕ್ಕೂ ಸೇರಿ 2809 ಕೋಟಿ ರೂ.ಗಳನ್ನು ನಮ್ಮ ಸರ್ಕಾರ ವೆಚ್ಚ ಮಾಡಿದೆ. 317 ಕೆರೆಗಳನ್ನು ಮೊದಲ ಹಂತದಲ್ಲಿ ತುಂಬಿಸಲಾಗಿದೆ. ವಿವಿಧ ಹಂತದ ಪ್ರಗತಿಯಲ್ಲಿರುವ ಎರಡನೇ ಹಂತದ ಕಾಮಗಾರಿಗಳಿಗೆ 1699 ಕೋಟಿ ರೂ.ಗಳನ್ನು ವೆಚ್ಚ ಮಾಡಲಾಗುತ್ತಿದೆ. 392 ಕೆರೆಗಳನ್ನುತುಂಬಿಸಲಾಗುತ್ತಿದೆ.ಹೊಸದಾಗಿ ನಂದಗುಡಿ ಸೂಲಿಬೆಲೆ ಯೋಜನೆಯನ್ನೂ ಕೈಗೆತ್ತಿಕೊಂಡು ತ್ಯಾಜ್ಯ ನೀರನ್ನು ಸಂಸ್ಕರಿಸಿ ಕೆರೆ ತುಂಬಿಸುವ ಕೆಲಸ ಮಾಡುತ್ತೇವೆ. ಇದನ್ನು ಕೋಲಾರ, ಚಿಕ್ಕಬಳ್ಳಾಪುರ ಸುತ್ತಲಿನ ಪ್ರದೇಶಗಳಲ್ಲಿ ತೋಟಗಾರಿಕೆ, ರೇಷ್ಮೆ, ಹೈನುಗಾರಿಕೆ ಹೆಚ್ಚಿದ್ದು ಅಂತರ್ಜಲ ಮಟ್ಟವನ್ನು ಹೆಚ್ಚಿಸುವ ಸಲುವಾಗಿ ಮಾಡಲಾಗುತ್ತಿದೆ ಎಂದರು. ಈ ಭಾಗದಲ್ಲಿ ನದಿಗಳಿಲ್ಲದಿರುವುದರಿಂದ 15 ಟಿ. ಎಂಸಿ ನೀರನ್ನು ಸಂಸ್ಕರಿಸಿ ತುಂಬಿಸಲಾಗುತ್ತದೆ. ಇದರಿಂಡ್ ರೈತರ ಆದಾಯ ಹೆಚ್ಚಳ ಮಾಡಲು ಸಾಧ್ಯವಾಗುತ್ತದೆ ಎಂದರು.

**ಸುಮಸಮಾಜ ಬಾಯಿಮಾತಿನಿಂದ ಆಗೋಲ್ಲ:** ಗ್ಯಾರಂಟಿ ಯೋಜನಗಳಿಂದ ಬಡವರು, ಹಿಂದುಳಿದವರು,ಪರಿಶಿಷ್ಟರು ಹಾಗೂ ಅಲ್ಪಸಂಖ್ಯಾತರು ಆರ್ಥಿಕ ಸಾಮಾಜಿಕ ಸ್ಥಿತಿ ಬದಲಾಗುತ್ತಿದೆ. ಸಮಸಮಾಜ ನಿರ್ಮಾಣ ಮಾಡುತ್ತೇವೆ ಎಂದು ಬಾಯಿ ಮಾತಿನಲ್ಲಿ ಹೇಳಿದರೆ ಸಾಧ್ಯವಾಗುವುದಿಲ್ಲ. ಸಮಸಮಾಜ ನಿರ್ಮಾಣಕ್ಕೆ ಬಡವರು, ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರಿಗೆ ಕಾರ್ಮಿಕರು, ಮಹಿಳೆಯರಿಗೆ ಆರ್ಥಿಕ ಸಾಮಾಜಿಕ ಶಕ್ತಿ ಯನ್ನಿ ತುಂಬುವ ಕೆಲಸ ಮಾಡಬೇಕು. ಆ ಕೆಲಸವನ್ನು ಗ್ಯಾರಂಟಿ ಕಾರ್ಯಕ್ರಮದ ಮೂಲಕ ಎಲ್ಲಾ ಜಾತಿಯ ಧರ್ಮದ ಜನರಿಗೆ ಶಕ್ತಿ ತುಂಬುತ್ತಿದ್ದೇವೆ. ಓದು ನಮ್ಮ ಆದ್ಯತೆಯ ಕಾರ್ಯಕ್ರಮ. ಕಾಂಗ್ರೆಸ್ ಪಕ್ಷ ಹಿಂದೆ ಅಧಿಕಾರ ದಲ್ಲಿದ್ದಾಗಲೂ ಅನ್ನಭಾಗ್ಯ, ಕೃಷಿಭಾಗ್ಯ, ಕ್ಷೀರಭಾಗ್ಯ, ಶಾದಿಭಾಗ್ಯ, ಶೂ ಭಾಗ್ಯ, ಇಂದಿರಾ ಕ್ಯಾಂಟೀನ್, ಮೈತ್ರಿ, ಮನಸ್ವಿನಿ ಕಾರ್ಯಕ್ರಮಗಳನ್ನು ರೂಪಿ ಸಿದ್ದೆವು. ಈಗಲೂ ನುಡಿದಂತೆ ನಡೆಯುತ್ತಿದ್ದೇವೆ. ಬಸವಣ್ಣನವರಿಗೆ ಸಾಂಸ್ಕೃತಿಕ ನಾಯಕ ಎಂದು ಕರೆದಿದ್ದೇವೆ. ಬಸವಾದಿ ಶರಣರಿಂದ ಪ್ರೇರೇಪಿತರಾಗಿರುವ ನಾವು ಬಡವರ ಪರವಾಗಿರುವ ಸರ್ಕಾರ ನೀಡುವ ಪ್ರಯತ್ನ ಮಾಡುತ್ತಿದ್ದೇವೆ ಎಂದರು.

**ಶರತ್ ಬಚ್ಚೇಗೌಡ ಕ್ರಿಯಾಶೀಲ ಶಾಸಕರು:** ಶರತ್ ಬಚ್ಚೇಗೌಡ ಕ್ರಿಯಾಶೀಲ ಶಾಸಕರು. ಅವರ ತಂದೆಯನ್ನೂ ಮೀರಿಸಿ ಬೆಳೆಯುವ ಎಲ್ಲಾ ಲಕ್ಷಣಗಳೂ ಇವೆ. ಜನಪ್ರತಿನಿಧಿಗಳಿಗೆ ಜನಪರ ಕಾಳಜಿ ಮುಖ್ಯ. ಕ್ಷೇತ್ರ ಅಭಿವೃದ್ಧಿ ಯ ಕಾಳಜಿ ಶರತ್ ಬಚ್ಚೇಗೌಡರಲ್ಲಿ ಇದೆ. ಉತ್ತಮ ಸಂಸದೀಯ ಪಟುವಾಗಿಯೂ ಹೊರಹೊಮ್ಮುತ್ತಿದ್ದಾರೆ.

# ಹಿರಿಯರನ್ನು ಗೌರವಿಸಿದಾಗ, ಸುಸಂಸ್ಕೃತ ಸಮಾಜ ನಿರ್ಮಾಣ ಸಾಧ್ಯ: ಸಾಣೇಹಳ್ಳಿ ಶ್ರೀ

» **ಹೊಸದುರ್ಗ**

ಮನುಷ್ಯನ ಬದುಕಿನಲ್ಲಿ ಮೂರು ಭಾಗ್ಯಗಳು ಮುಖ್ಯವಾಗಿ ಬೇಕು. ಸುಸಂಸ್ಕೃತ ತಂದೆ-ತಾಯಿಗಳು ಪ್ರತಿಯೊಬ್ಬ ಮಕ್ಕಳಿಗೂ ದೊರೆಯಬೇಕು. ಗುರು ಸಮಾಜದ ಬಗ್ಗೆ ಗೌರವ, ಶಿಷ್ಯರ ಏಳ್ಗೆ ಕಂಡು ಸಂತೋಷಪಡಬೇಕು. ಅರಿವಿನ ಆಗರವಾಗಿರಬೇಕು. ಭಗವಂತನ ಆಶೀರ್ವಾದ ಇರಬೇಕು. ಈ ಮೂರು ಸೌಭಾಗ್ಯಗಳಿದ್ದಾಗ ನಾವು ಭಾಗ್ಯವಂತರಾಗಲು ಸಾಧ್ಯ ಎಂದು ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಹೊಸದುರ್ಗ ತಾಲೂಕಿನ ಸಾಣೇಹಳ್ಳಿ ಶ್ರೀಮಠದ ಎಸ್.ಎಸ್.ರಂಗಮಂದಿರದಲ್ಲಿ ಭಾನುವಾರ ಆಯೋಜಿಸಿದ್ದ ಹಳೆ ಬೇರು ಹೊಸ ಚಿಗುರು- ದವಸ ಸಮರ್ಪಣೆ ಮತ್ತು ಹಿರಿಯ ಚೇತನಗಳಿಗೆ ಅಭಿನಂದನೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿ, ಹಿರಿಯ ಚೇತನಗಳನ್ನು ಗೌರವಿಸುವ ಈ ಕಾರ್ಯಕ್ರಮ ಹೃದಯಸ್ಪರ್ಶಿಯಾದುದು. ಮನುಷ್ಯ ಎಷ್ಟು ವರ್ಷ ಬಾಳಿದ ಎನ್ನುವುದಕ್ಕಿಂತ ಆರೋಗ್ಯವಂತನಾಗಿ, ಎಲ್ಲರ ಪ್ರೀತಿ-ವಿಶ್ವಾಸವನ್ನು ಗಳಿಸಿಕೊಂಡು ಸಮಾಜದಲ್ಲಿ ಗೌರವಯುತವಾಗಿ ಬಾಳುವುದು ಮುಖ್ಯ. ಹಿರಿಯರನ್ನು ಗೌರವಿಸದ ಸಮಾಜ ಜಾಗೃತ ಸಮಾಜವಾಗಲಾರದು. ಸಂಸ್ಕಾರವಂತ ಸಮಾಜವಾಗಲಾರದು. ಮಠ ಮತ್ತು ಮನೆಯಲ್ಲಿರುವಂಥ ಹಿರಿಯರನ್ನು ಗೌರವಿಸಬೇಕು. ಆಗ ಸುಸಂಸ್ಕೃತ ಸಮಾಜ ನಿರ್ಮಾಣವಾಗಲು ಸಾಧ್ಯ ಎಂದರು.

ನಮ್ಮಲ್ಲಿ ಏಕದೇವನಿಷ್ಠೆ ಇಲ್ಲ. ನಮ್ಮ ಹಿರಿಯರು ನಂಬಿದ ದೇವರನ್ನು ಸಂಪೂರ್ಣವಾಗಿ ನಂಬಿ ಏಕದೇವನಿಷ್ಠೆಯುಳ್ಳವರಾಗಿದ್ದರು. ಹೆಣ್ಣು, ಹೊನ್ನು, ಮಣ್ಣು, ಒಡವೆಗಳನ್ನು ಸಂಪಾದಿಸಲಿಲ್ಲ. ಅರಿವನ್ನೇ ಒಡವೆಯನ್ನಾಗಿ ಪಡೆದು ಅನುಭಾವಿಗಳಾದರು. ಜೀವನ ಎನ್ನುವುದು ನೀರಿನ ಮೇಲೆ ಗುಳ್ಳೆ ಇದ್ದಂತೆ. ವ್ಯಕ್ತಿ ಎಷ್ಟು ದಿನ ಬದುಕಿದ ಎನ್ನುವುದಕ್ಕಿಂತ ಬದುಕಿದ ಅವಧಿಯಲ್ಲಿ ಎಷ್ಟು ಜನರ ಪ್ರೀತಿ- ವಿಶ್ವಾಸಗಳನ್ನು




ಗಳಿಸಿ ಆದರ್ಶವನ್ನಿಟ್ಟುಕೊಂಡಿದ್ದಾನೆ ಎನ್ನುವುದು ತುಂಬಾ ಮುಖ್ಯ. ನಮ್ಮ ಸಮಾಜದಲ್ಲಿ ಒಳ್ಳೆಯ ಕೆಲಸ ಮಾಡಿದ ಅನೇಕ ಹಿರಿಯರಿದ್ದಾರೆ. ಅಂತಹ ಹಿರಿಯರನ್ನು ಗೌರವಿಸುವ ಕಾರ್ಯ ಸಾಣೇಹಳ್ಳಿ ಮಠದಲ್ಲಿ ಕಳೆದ ಹಲವು ಹರ್ಷಗಳಿಂದ ನಡೆತಾ ಬಂದಿರುವುದು ನಮಗೆ ತುಂಬಾ ಸಂತೋಷವನ್ನುಂಟು ಮಾಡಿದೆ. ಎಲ್ಲರ ಮನೆಗಳಲ್ಲಿ ಹಿರಿಯರನ್ನು ಪ್ರೀತಿ-ವಿಶ್ವಾಸದಿಂದ ಕಾಣಬೇಕು. ನಮ್ಮ ಹಿರಿಯರನ್ನು ನಾವು ಗೌರವಿಸಿದರೆ ನಾಳೆ ನಮ್ಮ ಮಕ್ಕಳು ನಮ್ಮನ್ನು ಗೌರವಿಸುತ್ತಾರೆ. ಇಲ್ಲ ಅಂದರೆ 'ಮುಯ್ಯಿಗೆ ಮುಯ್ಯಿ' ಎನ್ನುವ ವಾತಾವರಣ ನಿರ್ಮಾಣವಾಗುವುದರಲ್ಲಿ ಸಂಶಯವೇ ಇಲ್ಲ. ಹಿರಿಯರು ಹೇಗೆ ನಡೆದುಕೊಳ್ಳುತ್ತಾರೋ ಹಾಗೆಯೇ ನಮ್ಮ ಮಕ್ಕಳು ನಡೆದುಕೊಳ್ಳುವರು. ಆದ್ದರಿಂದ ನಮ್ಮ ಮಕ್ಕಳ ಮನಸ್ಸು ಅರಳುವ ಹಾಗೆ ನಡೆದುಕೊಳ್ಳಬೇಕು. ಆಗ ನಮ್ಮ ಬದುಕು ಅರಳುವುದು. ಸಾಣೇಹಳ್ಳಿಯಲ್ಲಿ ಇಷ್ಟೆಲ್ಲಾ ಪ್ರಗತಿ ಆಗಲಿಕ್ಕೆ ನಿಮ್ಮಂಥ ಮುಗ್ಧ ಭಕ್ತರೇ ಕಾರಣ. ಭಕ್ತಿಗೆ ಎಂದೂ ಬರಗಾಲವಿಲ್ಲ. ಏನಾದರೂ ಮಠಕ್ಕೆ ಸಲ್ಲಿಸಬೇಕು ಎನ್ನುವ ಸದ್ಭಾವನೆ ಮತ್ತು ಹೃದಯ ಶ್ರೀಮಂತಿಕೆ ನಮ್ಮ ಭಕ್ತರಿಗಿದೆ ಎಂದರು. ಮುಖ್ಯ ಅತಿಥಿಗಳಾಗಿ ನಿವೃತ್ತ ನ್ಯಾಯಾಧೀಶ ಹೆಚ್.ಬಿಲ್ಲಪ್ಪ ಮಾತನಾಡಿ, ನಮ್ಮ ಅಪೇಕ್ಷೆಗಳು ಇನ್ನು ಹೆಚ್ಚು ಹೆಚ್ಚು ಕೊಡು ಎಂದು ದೇವರಲ್ಲಿ ಬೇಡುತ್ತೇವೆಯೇ ಹೊರತು ಒಳ್ಳೆಯ ಮನೋಸ್ಥಿತಿಯನ್ನು ಕೊಡು ಎಂದು ದೇವರನ್ನು ಯಾರೂ ಬೇಡಿಕೊಳ್ಳುವುದಿಲ್ಲ. ಭಗವಂತನ ಇಚ್ಛೆಯನ್ನು ನಾವೆಲ್ಲರೂ ಅರಿತುಕೊಂಡರೆ ಸ್ವಾರ್ಥಿಗಳಾಗಲಿಕ್ಕೆ ಸಾಧ್ಯವಿಲ್ಲ. ನಮ್ಮ ಹಿರಿಯರು ತಮ್ಮ ಜೀವನವನ್ನು ತ್ಯಾಗ ಮಾಡಿ ಸಮಾಜಕ್ಕೆ ತಮ್ಮ ಜೀವನವನ್ನು ಮುಡುಪಾಗಿಟ್ಟಿದ್ದಾರೆ. ಅಂತಹ ಹಿರಿಯರಿಗೆ ಗೌರವಿಸುವುದು ಸಂಸ್ಕಾರವಂತ ಸಮಾಜ ಕರ್ತವ್ಯ. ಸತ್ಯಕ್ಕಾಗಿ ಹೋರಾಟ ಮಾಡಿದ ಹಿರಿಯರು ದುರಂತ ಸಾವಿನಲ್ಲಿ ಅಂತ್ಯವಾಗಿರುವುದು ತುಂಬಾ ನೋವಿನ ಸಂಗತಿ. ನಮ್ಮ ಸಮಾಜಕ್ಕೆ ಮುಂದಿನ ದಿನಗಳಲ್ಲಿ ಹಿರಿಯರ ಮಾರ್ಗದರ್ಶನ ತುಂಬಾ ಅಗತ್ಯ. ನಾವೆಲ್ಲರೂ ನಮ್ಮ ಮನೆಗಳನ್ನು ಆಶ್ರಮದ ರೀತಿಯಲ್ಲಿಟ್ಟುಕೊಳ್ಳಬೇಕು. ನಮ್ಮ ಮನಸ್ಸಿನಲ್ಲಿ ತುಂಬಾ ಕೆಟ್ಟ ಕೆಟ್ಟ ಆಲೋಚನೆಗಳಿವೆ, ಮೃಗೀಯ ಗುಣಗಳಿವೆ. ಅಂತಹ ಗುಣಗಳನ್ನು ದೂರ ತಳ್ಳಿ ಮನುಷ್ಯತ್ವದ ಗುಣಗಳನ್ನು ಅಳವಡಿಸಿಕೊಂಡಾಗ ಮಾತ್ರ ಸುಸಂಸ್ಕೃತ ಸಮಾಜ ನಿರ್ಮಾಣ ಮಾಡಲಿಕ್ಕೆ ಸಾಧ್ಯ ಎಂದರು.

ದವಸ ಸಂಗ್ರಹ ಸಮಿತಿಯ ಸದಸ್ಯರನ್ನು ಅಭಿನಂದಿಸಲಾಯಿತು. ಚಿಣ್ಣಾಪುರದ ಮರುಳಪ್ಪ, ತಡಗದ ಗಂಗಾಧರಪ್ಪ, ಗೋಂದಿಹೊಸಳ್ಳಿಯ ಮಹೇಶ್ವರಪ್ಪ, ಶಿವನಿಯ ಶ್ರೀಕಂಠಪ್ಪ, ಕೊರಟಿಕೆರೆಯ ಶೇಖರಪ್ಪ, ಹೊಗರೇಹಳ್ಳಿಯ ಮುದ್ದೆಮನೆ ಸಿದ್ಧಪ್ಪ, ನಂದಿಯ ಪಾಲಣ್ಣರ ಚಂದ್ರಪ್ಪ, ನರಸೀಪುರದ ತೋಟಪ್ಪ, ಹುಣಸಘಟ್ಟದ ಷಡಾಕ್ಷರಪ್ಪ, ನೇರಲಕೆರೆಯ ಮಹಾಲಿಂಗಯ್ಯ, ಏತಲಾಪುರದ ಹಾಲಪ್ಪ, ಚಿಕ್ಕವನಂಗಲ ಮರುಳಪ್ಪ, ನೆಲ್ಲಿಹಂಕಲು ಶಾಂತವೀರಪ್ಪ, ಗಂಗಗೊಂಡನಹಳ್ಳಿ ಬಸವರಾಜಪ್ಪ, ಗೋಪಾಲ ಕಾಲೋನಿ ತಮ್ಮಯ್ಯ, ಬೆಟ್ಟದಹಳ್ಳಿ ಬಸವರಾಜಪ್ಪ, ಬಿದರಿಕೆರೆ ಮರುಳಸಿದ್ದಪ್ಪ, ಗುಂಡಸಮುದ್ರ ಮಹೇಶ್ವರಪ್ಪ, ಮೇಲನಹಳ್ಳಿ ಮೂರ್ತಯ್ಯ, ಕಗ್ಗಿ ಶಂಕರಪ್ಪ, ಕುಂದೂರು ರಾಮಚಂದ್ರಪ್ಪ, ಬಂದಿಕೊಪ್ಪಲು ಮಹೇಶ್ವರಪ್ಪ, ಬುಕ್ಕಸಾಗರದ ರೇಣುಕಾ ಗಿರಿಜಾಶಂಕರ್, ಸಾಣೇಹಳ್ಳಿ ವೀರಯ್ಯ, ಕಲ್ಲೇದೇವರಹಳ್ಳಿ ದೇವರಾಜಪ್ಪ, ಹಿರೇಕಾನವಂಗಲ ಕಲ್ಲೇಶಪ್ಪ, ಸಪ್ಪನಹಳ್ಳಿ ಈಶ್ವರಪ್ಪ, ಶೆಟ್ಟಿಹಳ್ಳಿಯ ರಾಮಜ್ಜ ಮೊದಲಾದ ಹಿರಿಯ ಚೇತನಗಳನ್ನು ಪಂಡಿತಾರಾಧ್ಯ ಶ್ರೀಗಳು ಶಾಲು, ಹಾರ ಹಾಕಿ, ಫಲಹಾರ, ಸ್ಮರಣಿಕೆಯನ್ನು ನೀಡಿ ಅಭಿನಂದಿಸಿದರು. ಸಮಾಜಕ್ಕಾಗಿ ಶ್ರಮಿಸಿ ನಿಧನರಾದ ಹಿರಿಯ ಚೇತನಗಳನ್ನು ಮೌನಾಚರಣೆಯ ಮೂಲಕ ಸಂತಾಪ ಸೂಚಿಸಿ ಸ್ಮರಿಸಿಕೊಳ್ಳಲಾಯಿತು. ಅಭಿನಂದಿತರಾದ ಶೆಟ್ಟಿಹಳ್ಳಿ ರಾಮಜ್ಜ ಮಾತನಾಡಿದರು. ಎಸ್ ಆರ್ ಚಂದ್ರಶೇಖರಯ್ಯ ಪ್ರಾಸ್ತಾವಿಕ ಮಾತುಗಳನ್ನಾಡಿದರು. ಆರಂಭದಲ್ಲಿ ಶಿವಸಂಚಾರದ ನಾಗರಾಜ್ ಹೆಚ್ ಎಸ್ ಮತ್ತು ತಬಲಸಾಥಿ ಶರಣ್ ವಚನಗೀತೆಗಳನ್ನು ಹಾಡಿದರು. ಆಲದಹಳ್ಳಿ ಓಂಕಾರಪ್ಪ ಸ್ವಾಗತಿಸಿದರೆ ಎಸ್ ಪಿ ಶೋಭಾ ನಿರೂಪಿಸಿ ವಂದಿಸಿದರು. ವೇದಿಕೆಯ ಮೇಲೆ ಎ ಸಿ ಚಂದ್ರಪ್ಪ ಮತ್ತಿತರರಿದ್ದರು. ಈ ಸಂದರ್ಭದಲ್ಲಿ 2 ಲಕ್ಷ ಹಣ, 41 ಕ್ವಿಂಟಲ್ ರಾಗಿ ಮತ್ತು ಕಡಲೆ, ಅಕ್ಕಿ, ಮೆಣಸಿನಕಾ ಶ್ರೀಮಠಕ್ಕೆ ಭಕ್ತರು ಸಮರ್ಪಿಸಿದರು.

**ಹಿರಿತನಕ್ಕೆ ಮಹತ್ವ ಕೊಟ್ಟ ವಚನಕಾರರು:** ನಮ್ಮ ವಚನಕಾರರು ಹಿರಿತನಕ್ಕೆ ಹೆಚ್ಚು ಮಹತ್ವವನ್ನು ಕೊಟ್ಟಿದ್ದರು. ವಯಸ್ಸಿನಲ್ಲಿ ಕಿರಿಯರಾಗಿದ್ದರೂ ಅರಿವಿನಿಂದ ಹಿರಿಯರಾಗಿದ್ದವರು. ಶರಣರು ಸತ್ಯವನ್ನು ಒರೆಗಲ್ಲಿಗಚ್ಚಿನೋಡುತ್ತಿದ್ದರು.ಹಿರಿತನಮತ್ತು ಹಿರಿತನದ ಸಮನ್ವಯತೆಯ ಮಧ್ಯದಲ್ಲಿದ್ದ "ವಿಚಾರಗಳನ್ನು ಅನುಭವ ಮಂಟಪದಲ್ಲಿ ಚರ್ಚಿಸುತ್ತಿದ್ದರು. ಕನ್ನಡ ಸಾಹಿತ್ಯ ಹಿರಿಯರ ಬಗ್ಗೆ ಹೆಚ್ಚು ಮಹತ್ವ ಕೊಟ್ಟಿದೆ. ಹಿರಿಯರನ್ನು ಗೌರವಿಸುವ ಜವಾಬ್ದಾರಿ ಮಠ ಹಾಗೂ ಮನೆಗಳ ಮೇಲಿದೆ. ಇವತ್ತು ಸಾಣೇಹಳ್ಳಿ ಮಠ ಹಿರಿಯರನ್ನು ಗೌರವಿಸುತ್ತಿರುವುದು ಬೇರೆ ಮಠಗಳಿಗೆ ಮಾದರಿಯಾಗಿದೆ. ಇತ್ತೀಚಿನ ದಿನಗಳಲ್ಲಿ ಹಿರಿಯ ಜೀವಿಗಳನ್ನು ನಿರ್ಲಕ್ಷಿಸುವುದು ಮಠಗಳಲ್ಲಿ, ಮನೆಗಳಲ್ಲಿ, ರಾಜಕೀಯ ಕ್ಷೇತ್ರದಲ್ಲಿ ಹೆಚ್ಚುತ್ತಿದೆ. ನಮ್ಮ ಹಿರಿಯ ತರಳಬಾಳು ಜಗದ್ಗುರು ಶ್ರೀ ಶಿವಕುಮಾರ ಶಿವಾಚಾರ್ಯ ಸ್ವಾಮೀಜಿಯವರ ಕಾಲದಲ್ಲಿ ಹಿರಿಯರ ಆತ್ಮಶಕ್ತಿಯಿಂದ ಅನೇಕ ಮನೆ, ಮಠಗಳು ಬೆಳೆದು ನಿಂತಿವೆ. ಮನೆ, ಮಠಗಳ ಬಗ್ಗೆ ಹಿರಿಯರಿಗಿದ್ದ ಪ್ರೀತಿಯನ್ನು ಇಂದಿನ ಯುವಪೀಳಿಗೆಗೆ ಧಾರೆಯೆರೆಯಬೇಕು ಎನ್ನುವುದು ಈ ಕಾರ್ಯಕ್ರಮದ ಉದ್ದೇಶ. ಭಕ್ತಿ ಎನ್ನುವುದು ಶ್ರದ್ಧೆಯ ಮೇಲೆ ನಿಂತಿರಬೇಕೇ ಹೊರತು ಭಯದಿಂದ ಕೂಡಿರಬಾರದು. ಇತ್ತೀಚಿನ ದಿನಗಳಲ್ಲಿ ಭಯದ ವಾತಾವರಣ ನಿರ್ಮಾಣವಾಗುತ್ತಿರುವುದು ಸೋಜಿಗದ ಸಂಗತಿ ಎಂದು ಸಾಹಿತಿ ಚಟ್ನಳ್ಳಿ ಮಹೇಶ್ ತಿಳಿಸಿದರು.

## ಫಾಸ್ಟ್ ನ್ಯೂಸ್

### ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿಗೆ ಟಿಕೇಟ್ ನೀಡುವಂತೆ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಿಗೆ ಮನವಿ



» **ಚಿತ್ರದುರ್ಗ**

ಈ ಬಾರಿಯ ಪಾರ್ಲಿಮೆಂಟ್ ಚುನಾವಣೆಯಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದಿಂದ ಸ್ಥಳೀಯ ಅಭ್ಯರ್ಥಿ ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿಗೆ ಕಾಂಗ್ರೆಸ್ ಟಿಕೇಟ್ ನೀಡುವಂತೆ ನೂರಾರು ಬೆಂಬಲಿಗರು ಶನಿವಾರ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಪಕ್ಷದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್‌ರವರಿಗೆ ಮನವಿ ಸಲ್ಲಿಸಿದರು.ಪ್ರವಾಸಿ ಮಂದಿರದಿಂದ ಮೆರವಣಿಗೆ ಮೂಲಕ ಕಾಂಗ್ರೆಸ್ ಕಚೇರಿಗೆ ಆಗಮಿಸಿದ ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿ ಬೆಂಬಲಿಗರು ಪ್ರತಿ ಚುನಾವಣೆಯಲ್ಲಿಯೂ ಹೊರಗಿನವರನ್ನು ಕರೆ ತಂದು ಇಲ್ಲಿಂದ ಚುನಾವಣೆಗೆ ಸ್ಪರ್ಧಿಸಲು ಅವಕಾಶ ಮಾಡಿಕೊಟ್ಟು ಸ್ಥಳೀಯರನ್ನು ನಿರ್ಲಕ್ಷಿಸುತ್ತಿರುವುದು ಸರಿಯಲ್ಲ. ಪಕ್ಷದ ವರಿಷ್ಠರು ನಮ್ಮ ಮನವಿಯನ್ನು ಪರಿಗಣಿಸಬೇಕೆಂದು ಒತ್ತಾಯಿಸಿದರು.ಕುಂಚಿನಗಹಾಳ್ ಮಹಲಿಂಗಪ್ಪ ಮಾತನಾಡಿ ಚಿತ್ರದುರ್ಗ ಲೋಕಸಭಾ ಕ್ಷೇತ್ರಾದ್ಯಂತ ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿಗೆ ಮತದಾರರು ಒಲವು ವ್ಯಕ್ತಪಡಿಸುತ್ತಿದ್ದಾರೆ. ಹಾಗಾಗಿ ಈ ಬಾರಿಯ ಚುನಾವಣೆಯಲ್ಲಿ ಟಿಕೇಟ್ ನೀಡಿದರೆ ಗೆಲ್ಲಿಸಿಕೊಂಡು ಬರುವುದು ನಮ್ಮ ಜವಾಬ್ದಾರಿ. ಸ್ಥಳೀಯ ಅಭ್ಯರ್ಥಿಗಳಿಗೆ ಕ್ಷೇತ್ರದಲ್ಲಿನ ಸಮಸ್ಯೆಗಳ ಅರಿವಿರುತ್ತದೆ. ಆದ್ದರಿಂದ ಯಾವುದೇ ಕಾರಣಕ್ಕೂ ಈ ಬಾರಿಯ ಚುನಾವಣೆಯಲ್ಲಿ ಹೊರಗಿನವರಿಗೆ ಟಿಕೇಟ್ ನೀಡಬಾರದೆಂದು ಆಗ್ರಹಿಸಿದರು.ಜೆ.ಜೆ. ಹಟ್ಟಿ ತಿಪ್ಪೇಸ್ವಾಮಿ ಬೆಂಬಲಿಗರಿಂದ ಮನವಿ ಸ್ವೀಕರಿಸಿ ಮಾತನಾಡಿದ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ನಿಮ್ಮ ಅಹವಾಲನ್ನು ಕೆ.ಪಿ.ಸಿ.ಸಿ. ರಾಜ್ಯಾಧ್ಯಕ್ಷ ಡಿ.ಕೆ.ಶಿವಕುಮಾರ್, ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಇವರುಗಳ ಗಮನಕ್ಕೆ ತರಲಾಗುವುದು ಎಂದು ಹೇಳಿದರು.

ಸ್ಲಂ ಜನಾಂದೋಲನ ಕರ್ನಾಟಕದ ಕೆ.ರಾಜಣ್ಣ, ನ್ಯಾಯವಾದಿ ಹರೀಶ್ ಎನ್. ಅಶ್ಪಕ್‌ಆಲಿ, ಹತಾವುಲ್ಲಾ, ಬಿ.ರಾಜಣ್ಣ, ಇರ್ಫಾನ್, ಕೆ.ರುದ್ರಮುನಿ, ಬಾಗೇನಾಳ್ ಓಬಳೇಶ್, ಮಲ್ಲಪ್ಪ, ಯೂತ್ ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಬ್ದುಲ್ ಫರಾಹತ್, ಅಲ್ಪಸಂಖ್ಯಾತ ವಿಭಾಗದ ತಾಲ್ಲೂಕು ಅಧ್ಯಕ್ಷ ಸಿರಾಜ್‌ವುಲ್ಲಾ, ಚಿದಾನಂದಮೂರ್ತಿ ಇನ್ನು ಅನೇಕರು ಈ ಸಂದರ್ಭದಲ್ಲಿ ಹಾಜರಿದ್ದರು.

### ನಾಲ್ಕು ವರ್ಷ 11 ತಿಂಗಳು ನಾನು ರಾಜಕೀಯ ಮಾಡಲ್ಲ: ಚಂದ್ರಪ್ಪ



» **ಚಿತ್ರದುರ್ಗ**

ನಾಲ್ಕು ವರ್ಷ 11 ತಿಂಗಳು ನಾನು ರಾಜಕೀಯ ಮಾಡಲ್ಲ, ಎಲ್ಲಾ ಪಕ್ಷದವರ ವಿಶ್ವಾಸ ಪಡೆದು ಕ್ಷೇತ್ರದ ಜನರಿಗೆ ಅನುಕೂಲವಾಗುವಂತ ಕೆಲಸ ಮಾಡುತ್ತಿದ್ದೇನೆ, ಚುನಾವಣೆ ಸಂದರ್ಭದಲ್ಲಿ ಕೇವಲ ಒಂದು ತಿಂಗಳ ಮಾತ್ರ ನಾನು ರಾಜಕೀಯ ಮಾಡುತ್ತೇನೆ, ಅಧಿಕಾರ ಶಾಶ್ವತವಲ್ಲ ಇರೋಷ್ಟು ದಿನ ಹತ್ತಾರು ಜನ ಮೆಚ್ಚುವ ರೀತಿ ಕೆಲಸ ಮಾಡುವ ಜಾಯಮಾನ ನನ್ನದು ಎಂದು ಶಾಸಕ ಎಂ.ಚಂದ್ರಪ್ಪ ತಿಳಿಸಿದರು. ಹೊಳಲ್ಕೆರೆ ತಾಲ್ಲೂಕಿನ ಮತ್ತಿಘಟ್ಟ ಗ್ರಾಮದಿಂದ ಚಿತ್ರದುರ್ಗ ಮುಖ್ಯ ರಸ್ತೆವರಿಗೂ 31.14 ಕೋಟಿ ರೂ ವೆಚ್ಚದ ಹಾಗೂ ಸಾಸಲು ವೃತ್ತದಿಂದ ಹಿರೇಬೆನ್ನೂರುವರೆಗೆ 34.25 ಕೋಟಿ ರೂ. ವೆಚ್ಚದ ನೂತನ ಸಿಸಿ ರಸ್ತೆ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದರು. .ಇನ್ನು ನೂರು ವರ್ಷಗಳಾದರೂ ಹಾಳಾಗದೆ ಗಟ್ಟಿಮುಟ್ಟಾಗಿರುವಂತ ಸಿಸಿ ರಸ್ತೆಗಳನ್ನು ನಿರ್ಮಾಣ ಮಾಡಲಾಗುತ್ತದೆ, ರಸ್ತೆ ಆಗೋದಕ್ಕಿಂತ ಮುಂಚೆ ರೈತರ ತಮ್ಮ ಹೊಲ ಹಾಗೂ ತೋಟಗಳಿಗೆ ಪೈಪ್ಗಳನ್ನು ಹಾಕಿಸಿಕೊಳ್ಳುವುದು ಉತ್ತಮ, 450 ಕೋಟಿ ರೂಗಳನ್ನು ಖರ್ಚು ಮಾಡಿ ಹಿರಿಯೂರಿನ ವಾಣಿವಿಲಾಸ ಸಾಗರದಿಂದ ನೀರು ತಂದು ತಾಲ್ಲೂಕಿನ ಎಲ್ಲಾ ಹಳ್ಳಿಗಳಿಗೆ, ಮನೆ ಮನೆಗೆ ಕುಡಿಯುವ ನೀರು ಪೂರೈಸಲಾಗುವುದು. ನಾನು ಶಾಸಕನಾಗಿ ಬಂದಮೇಲೆ ಇಲ್ಲಿ ಮಣ್ಣಿನ ರಸ್ತೆ ಇತ್ತು, ಯಾರಿಂದ ಏನನ್ನು ಹೇಳಿಸಿಕೊಳ್ಳದೆ ಇಲ್ಲಿ ಯಾವ ಕೆಲಸವಾಗಬೇಕೆನ್ನುವುದನ್ನು ಕಣ್ಣಾರೇ ಕಂಡು ಕ್ಷೇತ್ರದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ದುಡಿಯುತ್ತಿದ್ದೇನೆ ಎಂದರು.ವಿಧಾನಸೌಧವನ್ನು 85 ಲಕ್ಷ ರೂಗಳಲ್ಲಿ ಕಟ್ಟಲಾಗಿದೆ, ನಿಮ್ಮ ಊರಿಗೆ 31 ವರೆ ಕೋಟಿ ರೂಗಳನ್ನು ಮಂಜೂರು ಮಾಡಿಸಿದ್ದೇನೆ, ಕೆರೆಯ ಮಧ್ಯದಲ್ಲಿ 40 ರಿಂದ 50 ಅಡಿ ಬೋರುವೆಲ್ ಕೊರೆದು ಪಿಲ್ಲರ್ ಹಾಕಿ ಮೋಟಾರ್ ಕೂರಿಸಿ ಡಿಸೆಂಬರ್-ಜನವರಿ ಒಳಗೆ ಎಲ್ಲಾ ಹಳ್ಳಿಗಳಿಗೂ ನೀರು ಸರಬರಾಜು ಮಾಡಲಾಗುವುದು, ವಿ.ವಿ ಸಾಗರದಿಂದ ಇನ್ನೂ ಹತ್ತು ವರ್ಷ ನೀರು ಬರದಿದ್ದರೂ ಹೆದರಬೇಕಾಗಿಲ್ಲ ಎಂದು ತಿಳಿಸಿದರು.

# ನಿಗಮದ ಅಭಿವೃದ್ಧಿಗೆ ಶ್ರಮಿಸುವ ಸಂಕಲ್ಪ ಮಾಡಿ

» **ಚಳ್ಳಕೆರೆ**

ನಾಡಿನಾದ್ಯಂತ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಚರಿಸಲಾಗುತ್ತಿದೆ. ಇಲ್ಲಿನ ಕೆಎಸ್‌ಆರ್‌ಟಿಸಿ ಡಿಪೋದಲ್ಲೂ ಸಹ ಕಾರ್ಯನಿರ್ವಹಿಸುತ್ತಿರುವ ಮಹಿಳೆಯರು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ವಿಶಿಷ್ಟವಾಗಿ ಆಚರಿಸಿದರು. ಸಾರಿಗೆ ಸಂಸ್ಥೆಯ ಬಸ್ ಆಕಾರದಲ್ಲಿ ಕೇಕ್ ತಯಾರಿಸಿ, ನಂತರ ಮಹಿಳಾ ಸಿಬ್ಬಂದಿ ಹಾಗೂ ಡಿಪೋ ವ್ಯವಸ್ಥಾಪಕ ಪ್ರಭು ನೇತೃತ್ವದಲ್ಲಿ ಕೇಕ್ ಕತ್ತರಿಸಿ ಹಂಚಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಡಿಪೋ ವ್ಯವಸ್ಥಾಪಕ ಪ್ರಭು, ಮಹಿಳೆಯರಲ್ಲೂ ಸಂಘಟಿತರಾಗಿ ಡಿಪೋದಲ್ಲಿ ಬಸ್ ಆಕಾರದ ಕೇಕ್ ಕತ್ತರಿಸುವ ಮೂಲಕ ಮಹಿಳಾ ದಿನಾಚರಣೆ ಆಚರಣೆ ಇಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಮಹಿಳೆಯರಿಗೆ ಹೆಚ್ಚು ಸ್ಪೂರ್ತಿ ತುಂಬುತ್ತದೆ. ಮಹಿಳೆಯರು ಇಂತಹ ದಿನಾಚರಣೆ ಸಂದರ್ಭದಲ್ಲಿ ಇನ್ನೂ ಹೆಚ್ಚು ಕ್ರಿಯಾಶೀಲತೆಯಿಂದ



ಕಾರ್ಯನಿರ್ವಹಿಸುವ ಸಂಕಲ್ಪ ಮಾಡಿ ರಸ್ತೆ ಸಾರಿಗೆ ನಿಗಮದ ಅಭಿವೃದ್ಧಿಗೆ ಪ್ರೇರಕಶಕ್ತಿಯಾಗಬೇಕು ಎಂದರು.

ಸಾರಿಗೆ ಸಂಸ್ಥೆಯ ನಿರ್ವಾಹಕಿ ಜಯಶೀಲಾ, ಉಮಾದೇವಿ, ಮಹಿಳಾ ಇನ್ಸ್‌ಪೆಕ್ಟರ್ ಪಲ್ಲವಿ, ಸೌಭಾಗ್ಯಶ್ರೀಕಾಂತ್, ಸೂಪರ್‌ವೈಜರ್ ಹಾಗಲೂರಪ್ಪ, ನಿರ್ವಾಹಕರಾದ ತಿಪ್ಪೇಸ್ವಾಮಿ, ಶ್ರೀನಿವಾಸ್, ಗೋಪನಹಳ್ಳಿ ಸತೀಶ್, ಚಾಲಕ ಡಿ.ಎಸ್.ಪ್ರಸಾದ್, ಸೈಫುದ್ದೀನ್, ಯಶವಂತ, ಭಜರಂಗಿ, ಭದ್ರಿ, ಮಲ್ಲನಗೌಡಪಾಟೀಲ್, ವಿನೋದಮ್ಮ, ನಾಗವೇಣಿ, ಕುರುಡಿಹಳ್ಳಿಸ್ವಾಮಿ, ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

# ರೈತ ದಯಾನಂದಮೂರ್ತಿಗೆ ಸಕಲವಾರ ರಾಮಯ್ಯರೆಡ್ಡಿ ಪ್ರಶಸ್ತಿ



» **ಚಳ್ಳಕೆರೆ**

ಬೆಂಗಳೂರಿನ ಕೃಷಿ ವಿಶ್ವವಿದ್ಯಾಲಯದಲ್ಲಿ ಅಲುಮ್ನಿ ಅಸೋಷಿಯೇಷನ್ ಕಂಪನಿಯಿಂದ ಚಳ್ಳಕೆರೆ ಪ್ರಗತಿಪರ ರೈತ ಆರ್.ಎ.ದಯಾನ 'ಂದಮೂರ್ತಿಯವರಿಗೆ ಸಕಲವಾರ ರಾಮಯ್ಯರೆಡ್ಡಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.ಈ ಸಂದರ್ಭದಲ್ಲಿ ಮಾತನಾಡಿದ ಪರಿಸರ ಅರಣ್ಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ಬಿ.ಪಿ.ರವಿ, ದೇಶಕ್ಕೆ ಅನ್ನ ನೀಡುವ ಅನ್ನದಾತರ ಬಗ್ಗೆ ಪ್ರತಿಯೊಬ್ಬರೂ ಹೆಮ್ಮೆ ಪಡಬೇಕು. ದೇಶದ ಗಡಿಗಳಲ್ಲಿ ಸೈನಿಕರು ಯಾವ ರೀತಿ ನಮ್ಮ ರಕ್ಷಣೆ ಮಾಡುತ್ತಾರೆ ಎಂಬ ಬಗ್ಗೆ ನಮಗೆ ಕಲ್ಪನೆ ಇದೆ. ರೈತ ಮತ್ತು ಸೈನಿಕ ಈ ದೇಶದ ಕಣ್ಣುಗಳು ಎಂದರು.

## ಪ್ರಮುಖ ಸುದ್ದಿ

### ಕೊಳವೆ ಬಾವಿಗಳ ಪಂಪ್ ಸೆಟ್ ಪದೇ ಪದೆ ಹಾಳು ಬೆಳೆ ಉಳಿಸಿಕೊಳ್ಳಲು ರೈತರಿಗೆ ಮತ್ತೊಂದು ಸವಾಲು

# ಬರದ ನಡುವೆ ವೋಲ್ಟೇಜ್ ವ್ಯತ್ಯಾಸಕ್ಕೆ ಮೋಟಾರ್ ದುರಸ್ತಿ ಹೊರೆ

» **ಮಹದೇವಪುರ ಶಿವಮೂರ್ತಿ**

ನಮ್ಮ ಜನ ವಿಶೇಷ

ಪರಶುರಾಂಪುರ:ಬಿಸಿಲಿನ ತಾಪದ ಜತೆ ಬೆಳೆಗಳಿಗೆ ನೀರಿನ ಕೊರತೆ ಒಂದು ಕಡೆಯಾದರೆ ಪದೇ ಪದೆ ಹಾಳಾಗುತ್ತಿರುವ ಕೊಳವೆ ಬಾವಿಗಳ ಮೋಟಾರ್ ಪಂಪ್ ದುರಸ್ತಿ ರೈತರಿಗೆ ಹೊರೆಯಾಗಿ ಪರಿಣಮಿಸಿದೆ.

ಚಳ್ಳಕೆರೆ ತಾಲ್ಲೂಕು ಬಯಲು ಸೀಮೆಯಾಗಿದ್ದು,ಬರ ಪೀಡಿತ ಪ್ರದೇಶವಾಗಿದೆ. ಬೋರ್ ವೆಲ್ ನೀರು ಅವಲಂಬಿಸಿ ಕೃಷಿ ಮಾಡುವ ಸ್ಥಿತಿ ಇಲ್ಲಿಯದು.ನೀರಾವರಿ ಆಶ್ರಿತ ಬೆಳೆಗಳತ್ತ ರೈತರು ಮುಖ ಮಾಡಿದ ಕಾರಣ ವರ್ಷದಿಂದ ವರ್ಷಕ್ಕೆ ಬೋರ್ ವೆಲ್‌ಗಳ ಸಂಖ್ಯೆಯು ಹೆಚ್ಚುತ್ತಿದೆ. ಪರಶುರಾಂಪುರ ಹೋಬಳಿಯ ವ್ಯಾಪ್ತಿಯಲ್ಲಿ ಬೆಸ್ಕಾಂ ಇಲಾಕೆಯ ಪ್ರಕಾರ ಸುಮಾರು ಏಳು ಸಾವಿರಕ್ಕೂ ಹೆಚ್ಚಿನ ಸಂಖ್ಯೆಯಲ್ಲಿವೆ.ಈ ಮೋಟಾರ್ ಪಂಪುಗಳನ್ನ ಹೊಂದಿರುವ ರೈತರು ನಾನಾ ತೊಂದರೆಗಳನ್ನು ಎದುರಿಸುತ್ತಿದ್ದಾರೆ.

ಪ್ರಮುಖವಾಗಿ ವೋಲ್ಟೇಜ್ ಏರಿಳಿತದಿಂದ ಮೋಟಾರ್ ಪಂಪುಗಳು ಮೇಲಿಂದ ಮೇಲೆ ಸುಡುತ್ತಿವೆ.ಕೆಲವು ಭಾಗಗಳಲ್ಲಿ ಕೇಬಲ್ ಸುಟ್ಟರೆ,ಇನ್ನೂ ಕೆಲವೆಡೆ ಸ್ಟಾರ್ಟ್ ಬೋರ್ಡ್, ಸೇರಿದಂತೆ ಒಂದಲ್ಲ ಒಂದು ಸಾಧನೆಗಳು ಮಾಡುತ್ತಿವೆ.ಇದು ರೈತರನ್ನು ಕೆಂಗಡಿಸಿದ್ದು,ಬರದ ಗಾಯದ ಮೇಲೆ ಬರೆ ಎಳೆದಂತಾಗಿದೆ.ಸುಟ್ಟಿರುವ ಮೋಟಾರ್ ನ್ನ ನೂರಾರು ಅಡಿಗಳ ಆಳದಿಂದ ಹೊರತೆಗೆದು ದುರಸ್ತಿ ಮಾಡಿಸಿ, ಪುನಃ ಜೋಡಿಸಲು ಎರಡ್ಮೂರು ದಿನಗಳಾದರೂ ಬೇಕು. ಅಲ್ಲದೆ ಸಾವಿರಾರು ರೂಪಾಯಿಗಳು ವೆಚ್ಚವಾಗುತ್ತಿದೆ.ನೀರಿಲ್ಲದೆ ಬೆಳೆಗಳು ಒಣಗುವುದನ್ನ ನೋಡಲಾಗದ ರೈತರು ಸಾಲ ಸೂಲ ಮಾಡಿಕೊಂಡು ನೀರಾವರಿ ವ್ಯವಸ್ಥೆ ಮಾಡಿಕೊಳ್ಳುವುದು ಅನಿವಾರ್ಯವಾಗಿದೆ.

ವೇಳಾಪಟ್ಟಿಯ ಅನುಗುಣವಾಗಿ ವಿದ್ಯುತ್ ಇಲ್ಲ ಅದರಲ್ಲೂ ವ್ಯತ್ಯಾಸಕ್ಕೆ ಬೆಳೆಗಳು ಒಣಗುತ್ತಿವೆ.ಇನ್ನೂ ಪಂಪು ಸೆಟ್ ಓಡುತ್ತಿರುವಾಗಲೇ ತಕ್ಷಣವೇ ಹೈವೋಲ್ಟೇಜ್ ಇಲ್ಲವೇ ಕಡಿಮೆ ಆದರೇ ಯಾವ ಪಂಪು ಸೆಟ್ ರಿಪೇರಿಗೆ ಬರದೇ ಇರುತ್ತೇ ಸರ್ .ಗಂಡ ಜಮೀನಲ್ಲಿ ವಿದ್ಯುತ್ ಕಾಯ್ದುಕೊಂಡು ಕೂತು ,ಕರೆಂಟ್ ವ್ಯತ್ಯಯದಿಂದಾಗಿ ಸುಟ್ಟು ಹೋದ ಪಂಪು ಸೆಟ್ ನ್ನ ಹೆಂಡತಿ ಕೂಲಿ ಮಾಡಿದ ಹಣದಿಂದ ವಾರದಲ್ಲಿ ಎರಡ್ಮೂರು ಬಾರಿ ರಿಪೇರಿ ಇದು ಸಾಲದೇ ಒಡವೆ ಅಡವಿಟ್ಟು ಮೋಟಾರ್ ದುರಸ್ತಿ ಮಾಡಿಸುವ ಅನಿವಾರ್ಯವಾಗಿದೆ ಎಂದು ರೈತ ಕೃಷ್ಣ ಮೂರ್ತಿ ತಮ್ಮ ಅಳಲನ್ನು ಹಂಚಿಕೊಂಡರು.



#### ವೋಲ್ಟೇಜ್ ವ್ಯತ್ಯಾಸ- ಮೋಟಾರ್ ಸುಡುತ್ತಿವೆ

ಲೋ ಹಾಗೂ ಹೈ ವೋಲ್ಟೇಜ್ ವಿದ್ಯುತ್ ಪೂರೈಕೆಯಲ್ಲಿ ಐದೈದು ನಿಮಿಷಗಳಲ್ಲಿ ಆಗುವ ವ್ಯತ್ಯಾಸದಿಂದ ಪಾತಾಳಕ್ಕಿಳಿದ ಅಂತರ್ಜಲ ಮೋಟಾರ್ ಪಂಪು ಸುಡಲು ಪ್ರಮುಖ ಕಾರಣ.ಇದರಿಂದ ನಾನಾ ರೀತಿಯಲ್ಲಿ ಸಮಸ್ಯೆಗಳನ್ನು ಎದುರಿಸುತ್ತಿರುವ ರೈತರು ವಾರಕ್ಕೆ ಎರಡ್ಮೂರು ಸಲಾ ಮೋಟಾರ್ ಪಂಪುಗಳ ರಿಪೇರಿಗೆ ಬಂದರೇ ಹಣ ಎಲ್ಲಿರುತ್ತೆ ಇದಕ್ಕಾಗಿ ಹೆಂಡತಿ ಮಕ್ಕಳ ಒಡವೆ ವಸ್ತ್ರಗಳನ್ನ ಅಡವಿಡಟ್ಟು ಬೆಳೆ ಉಳಿಸಿಕೊಳ್ಳಲು ಒದ್ದಾಡುತ್ತಿರುವ ಕಾಣಬಹುದಾಗಿದೆ.

#### ಪ್ರತಿಭಟನೆ ಬಿಸಿಯು ತಟ್ಟಿದೆ

ನಾನಾ ಸಮಸ್ಯೆಗಳನ್ನ ಎದುರಿಸುತ್ತಿರುವ ರೈತರು ಬೆಸ್ಕಾಂ ಶಾಖೆಯ ಮುಂಭಾಗ ಆಳಾದ ಮೋಟಾರ್ ಪಂಪುಗಳನ್ನ ಇಟ್ಟು ಪ್ರತಿಭಟನೆ,ಶಾಖೆಗೆ ರೈತ ಸಂಘದ ಜತೆ ರೈತರು ಕಳ್ಳೆ ಮುಳ್ಳಿನ ಗಾಡಿ ಅಡ್ಡ ನಿಲ್ಲಿಸಿ ಪ್ರತಿಭಟನೆ ಜತೆ ಬೆಸ್ಕಾಂ ಮೇಲಾಧಿಕಾರಿಗಳು ಬರುವ ತನಕ ಕ್ಯಾದಿಗುಂಟೆ ಗ್ರಾಮದಲ್ಲಿ ಮೋಟಾರ್ ಲೈನ್ ಛಾರ್ಜ್ ಮಾಡಿಸದೇ ಇದ್ದು ಪ್ರತಿಭಟನೆ ಹೀಗೆ ಹಲವಾರು ಪ್ರಕಾರಗಳಲ್ಲಿ ಇಲಾಖೆ ಬಿಸಿ ಮುಟ್ಟಿಸಿದ ರೈತರು ಸಂಬಂಧ ಪಟ್ಟ ಇಲಾಖೆಯವರು ನೀಡಿದ ಭರವಸೆಯನ್ನ ಹಿಡೇರಿಸಿ ರೈತರಿಗೆ ಸ್ಪಂದಿಸಲಿ ಎಂಬುದು ಎಲ್ಲರ ಆಶಯವಾಗಿದೆ.

## ಫಾಸ್ಟ್ ನ್ಯೂಸ್

### ಮಾವಿನಹಳ್ಳಿ ಬಸವೇಶ್ವರ ಸ್ವಾಮಿಯ ರಥೋತ್ಸವ



» **ಚಿತ್ರದುರ್ಗ**

ತಾಲ್ಲೂಕಿನ ಹಿರೇಗುಂಟನೂರು ಹೋಬಳಿಯ ಭೀಮಸಮುದ್ರ ಬಸವಾಪುರದ ಶ್ರೀ ಮಾವಿನಹಳ್ಳಿ ಬಸವೇಶ್ವರ ಸ್ವಾಮಿಯ ರಥೋತ್ಸವದ ಅಂಗವಾಗಿ ಮಾ. 15 ರಿಂದ ಮಾ. 20ರವರೆಗೆ ವಿವಿಧ ರೀತಿಯ ಕಾರ್ಯಕ್ರಮಗಳು ನಡೆಯಲಿವೆ ಎಂದು ಮಾವಿನಹಳ್ಳಿ ಬಸವೇಶ್ವರ ಸ್ವಾಮಿ ಟ್ರಸ್ಟ್‌ನ ಉಪಾಧ್ಯಕ್ಷರಾದ ಬಿ.ಎಸ್.ವಿಶ್ವನಾಥ್‌ಪ್ಪ ಪಟೇಲ್ ತಿಳಿಸಿದ್ದಾರೆ. ಮಾ.15 ರಂದು ರುದ್ರಾಭಿಷೇಕ, ಕಂಕಣಧಾರಣೆ, ಪಲ್ಲಕ್ಕಿ ಉತ್ಸವ ಧ್ವಜಾರೋಹಣ ಕಾರ್ಯಕ್ರಮವೂ ನೆಲ್ಲಿಕಟ್ಟೆ ಗ್ರಾಮಸ್ಥರಿಂದ ನೇರವೇರಲಿದೆ. ಮಾ. 16ರಂದು ಅಶ್ವೋತ್ಸವ ಬೆಟ್ಟದನಾಗೇನಹಳ್ಳಿ ಗ್ರಾಮಸ್ಥರಿಂದ, ಮಾ. 17 ರಂದು ವೃಷಭೋತ್ಸವ ಬಸವಾಪುರ ಗ್ರಾಮಸ್ಥರಿಂದ, ಫೆ.18 ರಂದು ಬೆಳ್ಳಿಗೆ 6 ಗಂಟೆಗೆ ಹೂವಿನ ಉತ್ಸವ ಸೇವೆ, ಸ್ವಾಮಿಗೆ ಗಜೋತ್ಸವ ಹಾಗೂ 10ಗಂಟೆಗೆ ಕೆಂಡದಾರ್ಚನೆ ಸೇವೆಯನ್ನು ತಿರುಮಲಾಪುರ ಹಾಗೂ ಲಿಂಗದಹಳ್ಳಿ ಗ್ರಾಮಸ್ಥರಿಂದ ಮಾ. 19 ರಂದು ಸ್ವಾಮಿಯ ಸಾನಿಧ್ಯದಲ್ಲಿ ಬೆಳಿಗ್ಗೆ 11 ಗಂಟೆಗೆ ಸಾಮೂಹಿಕ ವಿವಾಹ ಮಹೋತ್ಸವ ಕಾರ್ಯಕ್ರಮ ನಡೆಯಲಿದ್ದು, ಈ ಸಂದರ್ಭದಲ್ಲಿ ಮಧು-ವರನಿಗೆ ಬಟ್ಟೆ, ವಧುವಿಗೆ ತಾಳಿಯನ್ನು ನೀಡಲಾಗುವುದು. ವಿವಾಹ ಆಗಲಿಚ್ಚಿಸುವವರು ದೇವಾಲಯದಲ್ಲಿ ಹೆಸರನ್ನು ನೊಂದಾಯಿಸಬಹುದಾಗಿದೆ. ಸಂಜೆ 4 ಗಂಟೆಗೆ ಹೂವಿನ ಅಡ್ಡಪಲ್ಲಕ್ಕಿ ನಂತರ 5 ಗಂಟೆಗೆ ಸ್ವಾಮಿಯ ರಥೋತ್ಸವ ಕಾರ್ಯಕ್ರಮ ನಡೆಯಲಿದ್ದು, ಮಾ. 20 ರಂದು ಕಂಕಣ ವಿಸರ್ಜನೆ ಹಾಗೂ ಮಹಾಮಂಗಳಾರತಿಯೊಂದಿಗೆ ಸ್ವಾಮಿಯ ಸೇವೆಗಳು ಮುಕ್ತಾಯ ಮಾಡಲಾಗುವುದು. ಇದೇ ಸಂದರ್ಭದಲ್ಲಿ ದೇವಾಲಯದ ಸ್ವಾಮಿಯ ನೂತನ ದೇವಾಲಯದ ನಿರ್ಮಾಣ ಕಾರ್ಯ ಪ್ರಾರಂಭವಾಗಿದ್ದು, ದೇವಾಲಯ ನಿರ್ಮಾಣಕ್ಕೆ ಸಹಾಯ ಮಾಡುವುದಾಗಿ ವಾಗ್ದಾನ ಮಾಡಿದವರು ಕೂಡಲೇ ಸಹಾಯವನ್ನು ಮಾಡುವುದರ ಮೂಲಕ ಶ್ರೀಘ್ರವಾಗಿ ದೇವಾಲಯ ಕಟ್ಟಡ ಪೂರ್ಣವಾಗುವಂತೆ ಮನವಿ ಮಾಡಲಾಯಿತು. ಅಲ್ಲದೆ ಈ ಎಲ್ಲಾ ಕಾರ್ಯಕ್ರಮಗಳಿಗೂ ಭಕ್ತಾಧಿಗಳು ಆಗಮಿಸುವುದರ ಮೂಲಕ ಸ್ವಾಮಿ ಕೃಪೆಗೆ ಪಾತ್ರರಾಗಲು ಮನವಿ ಮಾಡಲಾಯಿತು. ಟ್ರಸ್ಟ್‌ನ ಉಪಾಧ್ಯಕ್ಷರಾದ ಎಸ್.ಬಿ.ಪುಟ್ಟಪ್ಪ ಸ್ಥಾನಿಕ್, ಪ್ರಧಾನ ಕಾರ್ಯದರ್ಶೀ ಆರ್. ಗಂಗಾಧರಪ್ಪ, ಕಾರ್ಯದರ್ಶೀ ಸಿದ್ದೇಶ್ ಸ್ಥಾನಿಕ್, ಸಹ ಕಾರ್ಯದರ್ಶಿ ಟಿ.ಎಸ್.ರುದ್ರಮುನಿಯಪ್ಪ, ಬಸವರಾಜ್ ಸ್ಥಾನಿಕ್, ಅರ್ಚಕರಾದ ಜಯ್ಯಣ್ಣ ಸ್ಥಾನಿಕ್, ವ್ಯವಸ್ಥಾಪಕರಾದ ಟಿ.ಎಂ.ಆನಂದ ಸ್ಥಾನಿಕ್ ಉಪಸ್ಥಿತರಿದ್ದರು.

### ವೃದ್ಧಾಶ್ರಮದಲ್ಲಿ ಆರೋಗ್ಯ ತಪಾಸಣೆ



» **ಹಿರಿಯೂರು**

ಹಿರಿಯೂರಿನ ಭೀಮನ ಬಂಡೆ ಬಳಿ ಇರುವ ಶುಭೋದಯ ವೃದ್ಧಾಶ್ರಮದಲ್ಲಿ 32 ಜನ ವೃದ್ಧರಿಗೆ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಸಮಾಜ ಸೇವಕರಾದ ಶ್ರೀಮತಿ ಅಂಬಿಕಾ ಇವರ ನೇತೃತ್ವದಲ್ಲಿ ಉಚಿತ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸೆಯನ್ನು ನೀಡಲಾಯಿತು .ಸಿ ಹೆಚ್ ಓ ವಾಸಿಂ, ವೃದ್ಧಾಶ್ರಮದ ತೇಜುಮೂರ್ತಿ, ಮಹಾಂತೇಶ್ ಮತ್ತಿತರರು ಇದ್ದರು

### ಮಾ.12 ರಂದು ದಾವಣಗೆರೆ ವಿವಿ 11ನೇ ಘಟಿಕೋತ್ಸವ

» **ದಾವಣಗೆರೆ**

ದಾವಣಗೆರೆ ವಿಶ್ವವಿದ್ಯಾನಿಲಯದ 11ನೇ ಘಟಿಕೋತ್ಸವವು ಮಾರ್ಚ್ 12 ರಂದು ಬೆಳಿಗ್ಗೆ 11 ಗಂಟೆಗೆ ತೋಳಹುಣಸೆಯಲ್ಲಿನ ಜ್ಞಾನಸೌಧ ಶಿವಗಂಗೋತ್ರಿ ಆವರಣದಲ್ಲಿ ನಡೆಯಲಿದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಜ್ಯಪಾಲರು ಹಾಗೂ ದಾವಣಗೆರೆ ವಿಶ್ವವಿದ್ಯಾನಿಲಯದ ಕುಲಾಧಿಪತಿಗಳಾದ ಥಾವರ್‌ಚಂದ್ ಗೆಹ್ಲೋಟ್ ಅವರು ವಹಿಸುವರು. ಉನ್ನತ ಶಿಕ್ಷಣ ಸಚಿವರು ಹಾಗೂ ವಿಶ್ವವಿದ್ಯಾನಿಲಯದ ಸಮಕುಲಾಧಿಪತಿಗಳಾದ ಡಾ.ಎಂ.ಸಿ.ಸುಧಾಕರ್ ಉಪಸ್ಥಿತರಿರುವರು.

# ತಾಲ್ಲೂಕಿನೆಲ್ಲೆಡೆ ಶಿವರಾತ್ರಿ ಹಬ್ಬದ ಸಂಭ್ರಮ

## ಎಲ್ಲೆಲ್ಲೋ ಶಿವನಾಮಸ್ಮರಣೆ; ಶಿವನನ್ನು ನಂಬಿದ ಭಕ್ತರಿಗೆ ಯಾವುದೆ ಕಂಟಕ ಎದುರಾಗದು: ರಘುಮೂರ್ತಿ

» **ಚಳ್ಳಕೆರೆ**

ಪ್ರತಿವರ್ಷದಂತೆ ಈ ವರ್ಷವೂ ಸಹ ಮಹಾಶಿವರಾತ್ರಿ ಹಬ್ಬವನ್ನು ಶಿವಪೂಜೆ, ಹೋಮ ಮತ್ತು ಪ್ರಸಾದ ವಿತರಣೆ ಮೂಲಕ ಭಕ್ತರು ಭಕ್ತಿಶ್ರದ್ದೆಯಿಂದ ಆಚರಿಸಿದರು. ನಗರದ ಬಹುತೇಕ ದೇವಸ್ಥಾನಗಳಲ್ಲಿ ಶಿವನನ್ನು ಆರಾಧಿಸುವ ಕಾರ್ಯಕ್ರಮಗಳು ಯಶಸ್ವಿಯಾಗಿ ನಡೆದವು. ಎಲ್ಲಾ ದೇವಸ್ಥಾನಗಳಲ್ಲೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಶಿವನಾಮಸ್ಮರಣೆಯೊಂದಿಗೆ ಶಿವನ ದರ್ಶನ ಪಡೆದರು.





ತಾಲ್ಲೂಕಿನ ದೊಡ್ಡೇರಿ ಗ್ರಾಮದ ಶ್ರೀಕನ್ನೇಶ್ವರ ಆಶ್ರಮದ ಶ್ರೀಮಲ್ಲಪ್ಪಸ್ವಾಮೀಜಿಯವರು ವಿಶೇಷವಾಗಿ ಹಮ್ಮಿಕೊಂಡಿದ್ದ ಮಹಾಶಿವರಾತ್ರಿ ಹಬ್ಬದ ಕಾರ್ಯಕ್ರಮದಲ್ಲಿ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಭಾಗವಹಿಸಿ ಗುರುಗಳ ಧಾರ್ಮಿಕ ಕಾರ್ಯಕ್ರಮಗಳಿಗೆ ಮೆಚ್ಚುಗೆ ವ್ಯಕ್ತಪಡಿಸಿ ಅವರನ್ನು ಸನ್ಮಾನಿಸಿದರು. ಕಳೆದ ಹಲವಾರು ವರ್ಷಗಳಿಂದ ಶ್ರೀಮಲ್ಲಪ್ಪಸ್ವಾಮೀಜಿಯವರ ನೇತೃತ್ವದಲ್ಲಿ ಎಲ್ಲಾ ಹಬ್ಬಗಳನ್ನು ಇಲ್ಲಿ ವೈಶಿಷ್ಟಪೂರ್ಣವಾಗಿ ಆಚರಣೆ ಮಾಡಲಾಗುತ್ತಿದೆ. ರಾಜ್ಯದ ಮೂಲೆ, ಮೂಲೆಯಿಂದ ಶಿವಭಕ್ತರು ಆಗಮಿಸಿ ದೇವರ ದರ್ಶನ ಪಡೆದಿದ್ದಾರೆ. ಭಕ್ತರ ಸಂಕಷ್ಟಗಳನ್ನು ನಿವಾರಿಸುವಂತೆ ಶಿವನಲ್ಲಿ ಪ್ರಾರ್ಥಿಸಿರುವುದಾಗಿ ತಿಳಿಸಿದರು.

ತಾಲ್ಲೂಕಿನ ಲಕ್ಷ್ಮೀಪುರ ಗ್ರಾಮದ ಶ್ರೀಭವಾನಿಶಂಕರ ದೇವಸ್ಥಾನದಲ್ಲೂ ಸಹ ಮಹಾಶಿವರಾತ್ರಿ ಹಬ್ಬ ಆಚರಿಸಲಾಯಿತು. ಗ್ರಾಮದ ನೂರಾರು ಶಿವಭಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಶಿವರಾತ್ರಿ ಮಹಿಮೆಯ ಬಗ್ಗೆ ದೇವಸ್ಥಾನದ ಅರ್ಚಕರು, ಖ್ಯಾತಜ್ಯೋತಿಷಿಯಾದ ಡಾ.ಅನಂತರಾಮ್‌ಗೌತಮ್ ಮಾತನಾಡಿದರು. ವೇದಬ್ರಹ್ಮನಾಗ ಶಯನಗೌತಮ್, ಜೆ.ಎಸ್. ಶ್ರೀನಾಥಶರ್ಮ, ಪ್ರದೀಪ್‌ಶರ್ಮ, ಎಂ.ಸತ್ಯನಾರಾಯಣರಾವ್, ಜಿ.ಕೃಷ್ಣಮೂರ್ತಿ, ಶೈಲಜಾ, ಶಾಂತಮ್ಮ, ಸಿ.ಎಸ್.ಗೋಪಿನಾಥ ಮುಂತಾದವರು ಪೂಜಾ ಕಾರ್ಯದಲ್ಲಿ ಭಾಗವಹಿಸಿದ್ದರು.







ತ್ಯಾಗರಾಜ ನಗರದ ಶ್ರೀಮಲ್ಲಿಕಾರ್ಜುನಸ್ವಾಮಿದೇವಸ್ಥಾನದಲ್ಲೂ ಸಹ ಶಿವರಾತ್ರಿ ಪೂಜೆಯನ್ನು ವಿಶೇಷವಾಗಿ ನಡೆಸಲಾಯಿತು. ದೇವಸ್ಥಾನದ ಶ್ರೀಮಲ್ಲಿಕಾರ್ಜುನಸ್ವಾಮಿಯೂ ಸೇರಿದಂತೆ ಎಲ್ಲೆಡೆ ವಿದ್ಯುತ್ ದೀಪಗಳ ಅಲಂಕಾರ ಜೋರಾಗಿತ್ತು. ಸುತ್ತಮುತ್ತಲ ಸಾವಿರಾರು ಭಕ್ತರು ಸರಥಿಸಾಲಿನಲ್ಲಿ ಆಗಮಿಸಿ ದೇವರ ದರ್ಶನಪಡೆದು ಪ್ರಸಾದ ಸ್ವೀಕರಿಸಿದರು. ನಿವೃತ್ತ ಶಿಕ್ಷಕ ಜಗದೀಶ್, ಸಿ.ಗುರುಸಿದ್ದಮೂರ್ತಿ, ಮಾತೃಶ್ರೀಮಂಜುನಾಥ, ಗಂಗಾಧರ ಮುಂತಾದವರು ಭಾಗವಹಿಸಿದ್ದರು. ಹಳೇಟೌನ್‌ನ ಶ್ರೀಮಲ್ಲಿಕಾರ್ಜುನಸ್ವಾಮಿ ದೇವಸ್ಥಾನದಲ್ಲೂ ಶಿವರಾತ್ರಿಯ ಜಾಗಣೆಯಲ್ಲದೆ, ಶನಿವಾರ ಬೆಳಗ್ಗೆ ಶ್ರೀಗಣಪತಿಹೋಮವನ್ನುನಡೆಸಲಾಯಿತು. ಚಾರ್ಟೆಡ್ ಅಕೌಂಟೇಟ್ ವಿಜಯವಸಂತ್ ದಂಪತಿಗಳು ಹಾಗೂ ಕುಟುಂಬ ವರ್ಗ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.



ಶ್ರೀವೀರಭದ್ರಸ್ವಾಮಿ ದೇವಸ್ಥಾನ, ಅಜ್ಜಯ್ಯನಗುಡಿ ರಸ್ತೆಯ ಶ್ರೀಪಂಚಮುಖಿಸ್ವಾಮಿ ದೇವಸ್ಥಾನ, ಸೂಜಿಮಲ್ಲೇಶ್ವರ ನಗರದ ದೇವಸ್ಥಾನ, ಜಗಜೀವನರಾಮ್ ಕಾಲೋನಿ ತಿಮ್ಮಪ್ಪದೇವಸ್ಥಾನ, ಶ್ರೀದತ್ತಾತ್ರೇಯ ದೇವಸ್ಥಾನ, ಪಾವಗಡ ರಸ್ತೆಯ ಶಿವನ ದೇವಸ್ಥಾನ ಮುಂತಾದ ಕಡೆಯಲ್ಲಿ ಮಹಾಶಿವರಾತ್ರಿ ಹಬ್ಬವನ್ನು ಭಕ್ತರು ಭಕ್ತಿಶ್ರದ್ದೆಯಿಂದ ಆಚರಿಸಿಕೊಂಡರು.

# ಹೊಸದುರ್ಗ: ಎಲ್ಲೆಡೆ ಶಿವ ನಾಮ ಸ್ಮರಣೆ

» **ಹೊಸದುರ್ಗ**

ತಾಲೂಕಿನ ಎಲ್ಲ ಗ್ರಾಮಗಳಲ್ಲಿ ಶಿವನಾಮ ಸ್ಮರಣೆ ಮಾಡುವ ಮೂಲಕ ಶಿವರಾತ್ರಿ ಜಾಗರಣೆ ಕಾರ್ಯಕ್ರಮಗಳು ವಿವಿಧಡೆ ವಿಶೇಷವಾಗಿ ಜರುಗಿದವು.



ಹಾಲುರಾಮೇಶ್ವರ: ತಾಲೂಕಿನ ಪುಣ್ಯಕ್ಷೇತ್ರ ಶ್ರೀ ಹಾಲುರಾಮೇಶ್ವರ ಶ್ರೀ ಕ್ಷೇತ್ರದಲ್ಲಿ ಶಿವರಾತ್ರಿ ಅಂಗವಾಗಿ ವಿಶೇಷ ಪೂಜಾ ಕಾರ್ಯಕ್ರಮಗಳು ಜರುಗಿದವು. ಬೆಳಿಗ್ಗೆಯಿಂದಲೆ ಅಭಿಷೇಕ, ಮಂಗಳಾರತಿಜರುಗಿತು.ರಾಜ್ಯದವಿವಿಧಡೆಯಿಂದ ಆಗಮಿಸಿದ್ದ ಭಕ್ತರು ಶಿವನ ದರ್ಶನ ಪಡೆಯುವುದರ ಜೊತೆಗೆ ಗಂಗಾಮಾತೆಯ ಪೂಜೆಯನ್ನು ನೆರವೇರಿಸಿದರು.

ಪರಪ್ಪ ಸ್ವಾಮಿ ಶಿವರಾತ್ರಿ ಜಾಗರಣೆ: ತಾಲೂಕಿನ ಬಾಗೂರು ಗ್ರಾಮದ ಶ್ರೀ ಪರಪ್ಪ ಸ್ವಾಮಿ ಮಠದಲ್ಲಿ ಶಿವರಾತ್ರಿ ಜಾಗರಾಣಾ ಸಪ್ತಾಹ ಕಾರ್ಯಕ್ರಮ ನಡೆಯುತ್ತಿದ್ದು. ಸೋಮವಾರ ಅಖಂಡ ಭಜನಾ ಕಾರ್ಯಕ್ರಮದೊಂದಿಗೆ ಆರಂಭಗೊಂಡ ಧಾರ್ಮಿಕ ಕಾರ್ಯಕ್ರಮದಲ್ಲಿ ಸಂಜೆ ಶ್ರೀ ಪರಪ್ಪ ಸ್ವಾಮಿಯ ಬೆಳ್ಳಿ ಮೂರ್ತಿಯ ಉತ್ಸವ ಜರುಗಿತು.

ಭೈರಪ್ಪನ ಬೆಟ್ಟದಲ್ಲಿ ಜಾಗರಣೆ: ಪಟ್ಟಣದ ಸಮೀಪದ ಭೈರಪ್ಪನ ಬೆಟ್ಟದ ಭೈರವೇಶ್ವರ ಸ್ವಾಮಿಗೆ ವಿಶೇಷ ಶಿವರಾತ್ರಿ ಜಾಗರಣಾ ಕಾರ್ಯಕ್ರಮ ನೆರವೇರಿತು. ಬೆಳಿಗ್ಗೆಯಿಂದಲೆ ನೂರಾರು ಭಕ್ತರು ಬೆಟ್ಟ ಹತ್ತುವಮೂಲಕ ದೇವರ ದರ್ಶನಕ್ಕೆ ಪಾತ್ರರಾದರು. ಬೆಟ್ಟದಲ್ಲಿನ ದೇವಸ್ಥಾನ ಅಲಂಕೃತ ಬಣ್ಣದ ದೀಪಗಳಿಂದ ಕಂಗೊಳಿಸುತಿತ್ತು.

ತಾಲೂಕಿನ ದಶರಥರಾಮೇಶ್ವರ ಶ್ರೀ ಕ್ಷೇತ್ರದಲ್ಲಿ, ಬಾಗೂರು ಕೋಡಿ ಕಲ್ಲೇಶ್ವರ ದೇವಸ್ಥಾನದಲ್ಲಿ, ಸಂಗೇನಹಳ್ಳಿಯ ಸಂಗಮೇಶ್ವರ ದೇವಸ್ಥಾನದಲ್ಲಿ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಶಿವರಾತ್ರಿ ವಿಶೇಷ ಪೂಜಾ ಕಾರ್ಯಕ್ರಮಗಳು ಜರುಗಿದವು.

## ಒಳ ಚರಂಡಿ ಪಿಟ್‌ಗಳನ್ನು ಸ್ವಚ್ಛಗೊಳಿಸಲು ಈ ಯಂತ್ರಗಳು ಸಂಪೂರ್ಣ ಸಹಕಾರಿಯಾಗಲಿದೆ



**ಹೊಸದುರ್ಗ:** ಮುಂದಿನ ಒಂದು ವರ್ಷದೊಳಗಾಗಿ ಎಲ್ಲಾ ಮನೆಗೆ ಯು.ಜಿ.ಡಿ ಸಂಪರ್ಕ ಕಲ್ಪಿಸಿ ಸಂಪೂರ್ಣ ಸ್ಯಾನಿಟೇಷನ್ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಭರವಸೆ ನೀಡಿದರು.ಪಟ್ಟಣದ ಪುರಸಭೆ ಆವರಣದಲ್ಲಿ ಭಾನುವಾರ 6000 ಲೀ ಮತ್ತು 1000 ಲೀ ಸಾಮರ್ಥ್ಯದ ಎರಡು ಸಕ್ಕಿಂಗ್ ಮತ್ತು ಜೆಟ್ಟಿಂಗ್ ಯಂತ್ರಗಳಿಗೆ ವಿಶೇಷ ಪೂಜೆ ಮಾಡಿ ಹಸಿರು ನಿಶಾನೆ ತೋರುಸುವ ಮೂಲಕ ಚಾಲನೆ ನೀಡಿ ನಂತರ ನಡೆದ ಸರಳ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.ಪಟ್ಟಣದ ವ್ಯಾಪ್ತಿಯಲ್ಲಿ 23 ವಾರ್ಡ್‌ಗಳಿದ್ದು ಸುಮಾರು 35000 ಜನ ಸಂಖ್ಯೆ ಇದ್ದು ಒಳ ಚರಂಡಿ ನಿರ್ವಹಣೆ ಮತ್ತು ಸಾರ್ವಜನಿಕರ ಪಿಟ್‌ಗಳನ್ನು ಸ್ವಚ್ಛಗೊಳಿಸಲು ಈ ಯಂತ್ರಗಳು ಸಂಪೂರ್ಣ ಸಹಕಾರಿಯಾಗಲಿದೆ ಎಂದರು.

**ಪ್ರಮುಖ ಸುದ್ದಿ**

### ರಾಜ್ಯದಲ್ಲಿ ಮಾದರಿ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣ

# ದಾವಣಗೆರೆ ಮುಖ್ಯ ಬಸ್ ನಿಲ್ದಾಣ ಲೋಕಾರ್ಪಣೆ

## ಮಲ್ಟಿಪ್ಲೆಕ್ಸ್ ಸಿನಿಮಾ, ಪ್ರಯಾಣಿಕರ ಸೌಲಭ್ಯದ ಜೊತೆಗೆ ಏಕಕಾಲದಲ್ಲಿ ಹಲವು ಬಸ್‌ಗಳ ನಿರ್ವಹಣೆ; ಸಾರಿಗೆ ಸಚಿವರಾದ ರಾಮಲಿಂಗಾರೆಡ್ಡಿ

» **ದಾವಣಗೆರೆ**

ದಾವಣಗೆರೆ ನೂತನ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ ಹಲವು ಆಧುನಿಕ ಸೌಕರ್ಯಗಳನ್ನು ಹೊಂದಿದ್ದು ಮಲ್ಟಿಪ್ಲೆಕ್ಸ್ ಸಿನಿಮಾ ಹಾಲ್‌ಗಳ ಜೊತೆಗೆ ಪ್ರಯಾಣಿಕರಿಗೆ ಬೇಕಾದ ಮೂಲಭೂತ ಸೌಕರ್ಯಗಳನ್ನು ಹೊಂದಿರುವ ರಾಜ್ಯದಲ್ಲಿನ ಮೊದಲ ಬಸ್ ನಿಲ್ದಾಣ ಇದಾಗಿದೆ ಎಂದು ಸಾರಿಗೆ ಹಾಗೂ ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿಯವರು ತಿಳಿಸಿದರು.



ಅವರು ಶನಿವಾರ ರಾಜ್ಯ ರಸ್ತೆ ಸಾರಿಗೆ ನಿಗಮ, ದಾವಣಗೆರೆ ಸ್ಮಾರ್ಟ್ ಸಿಟಿ ಯೋಜನೆಯಡಿ ನಿರ್ಮಾಣ ಮಾಡಲಾಗಿರುವ ದಾವಣಗೆರೆ ಮುಖ್ಯ ಬಸ್ ನಿಲ್ದಾಣ ಹಾಗೂ ಬೇತೂರು ರಸ್ತೆಯಲ್ಲಿನ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣ ಲೋಕಾರ್ಪಣೆ ಮಾಡಿ ಮುಖ್ಯ ಬಸ್ ನಿಲ್ದಾಣದಲ್ಲಿ ಏರ್ಪಡಿಸಲಾದ ಸಮಾರಂಭದಲ್ಲಿಮಾತನಾಡಿದರು.ಸ್ಮಾರ್ಟ್ ಸಿಟಿ ಯೋಜನೆಯಡಿ ದಾವಣಗೆರೆ ಮುಖ್ಯ ಬಸ್ ನಿಲ್ದಾಣ ಮತ್ತು ಬೇತೂರು ರಸ್ತೆಯ ಬಸ್ ನಿಲ್ದಾಣ ನಿರ್ಮಾಣ ಮಾಡಲಾಗಿದೆ. ಮುಖ್ಯ ಬಸ್ ನಿಲ್ದಾಣವನ್ನು ಶೇ 109.84 ಕೋಟಿಯಲ್ಲಿ 6.07 ಎಕರೆ ವಿಸ್ತೀರ್ಣದಲ್ಲಿ ನಿರ್ಮಾಣ ಮಾಡಲಾಗಿದೆ. ಇದರಲ್ಲಿ ಶೇ 25 ರಷ್ಟು ನಿಗಮದ ಅನುದಾನ ಹಾಗೂ ಶೇ 75 ರಷ್ಟು ಸ್ಮಾರ್ಟ್ ಸಿಟಿ ಯೋಜನೆ ಅನುದಾನವಾಗಿದೆ. ಮತ್ತು ಬೇತೂರು ರಸ್ತೆಯಲ್ಲಿನ ಬಸ್ ನಿಲ್ದಾಣವನ್ನು 1.20 ಎಕರೆ ಜಾಗದಲ್ಲಿ ರೂ.8.96 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿದೆ. ದಾವಣಗೆರೆಯಿಂದ ಪ್ರತಿನಿತ್ಯ 1400 ಕ್ಕಿಂತ ಹೆಚ್ಚು ಬಸ್‌ಗಳು ಬಂದು ಹೋಗುತ್ತವೆ. ಇಲ್ಲಿಗೆ ಆಗಮಿಸುವ ಬಸ್‌ಗಳ ಸಂಖ್ಯೆಯು ಹೆಚ್ಚಿದ್ದು ಅದಕ್ಕೆ ಬೇಕಾದ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ ಎಂದರು.

ಶಕ್ತಿ ತಂದ ಮೇಲೆ ಮಹಿಳೆಯರಿಗೆ ಶಕ್ತಿ; ಚುನಾವಣಾ ಪೂರ್ವದಲ್ಲಿ ನೀಡಿದ ಭರವಸೆಯಂತೆ ಸರ್ಕಾರ ಬಂದು 15 ದಿನಗಳಲ್ಲಿ ಮಹಿಳೆಯರು ಉಚಿತ ಪ್ರಯಾಣಿಸುವ ಶಕ್ತಿ ಯೋಜನೆಯನ್ನು ಜಾರಿಗೆ ತರಲಾಯಿತು. ಈ ಯೋಜನೆ ಜಾರಿಯಿಂದ ಮುಂದಿನ ದಿನಗಳಲ್ಲಿ ನಿಗಮದ ಬಸ್‌ಗಳಿಗೆ ಇಂಧನ ಭರಿಸಲು ಹಣವಿಲ್ಲದಂತಾಗುತ್ತದೆ ಎಂಬ ಭಾವನೆಯನ್ನು ನಿವಾರಣೆ ಮಾಡಿ ನಿಗಮವನ್ನು ಅತ್ಯುತ್ತಮವಾಗಿ ನಡೆಸಿಕೊಂಡು ಹೋಗಲಾಗುತ್ತಿದೆ. ಶಕ್ತಿ ಬಂದಾಗಿನಿಂದ ರಾಜ್ಯದಲ್ಲಿ 160 ಕೋಟಿಗಿಂತಲೂ ಹೆಚ್ಚಿನ ಮಹಿಳೆಯರು ಪ್ರಯಾಣಿಸಿದ್ದು ಇವರಿಗೆ ಆರ್ಥಿಕವಾಗಿ ಶಕ್ತಿ ತುಂಬಲಾಗಿದೆ.

ಸಿಬ್ಬಂದಿ ನೇಮಕ, ಹೊಸ ಬಸ್‌ಗಳ ಖರೀದಿ; ವಿವಿಧ ಸಾರಿಗೆ ನಿಗಮಗಳಿಗೆ ಸುಮಾರು 5800 ಹೊಸ ಬಸ್‌ಗಳನ್ನು ಖರೀದಿ ಮಾಡಲಾಗುತ್ತಿದ್ದು ಈಗಾಗಲೇ ಅರ್ಧಕ್ಕೂ ಹೆಚ್ಚು ಹೊಸ ಬಸ್‌ಗಳು ಬಂದಿವೆ. ಉಳಿದ ಅರ್ಧ ಬಸ್‌ಗಳು ಬರಬೇಕಾಗಿದೆ. 2016 ರಿಂದ ಸಾರಿಗೆ ನಿಗಮದಸಿಬ್ಬಂದಿಗಳನೇಮಕಾತಿನಡೆಯದ ಕಾರಣ ಹೊಸ ಬಸ್ ಖರೀದಿಸಿದರೂ ಸಿಬ್ಬಂದಿ ಕೊರತೆಯಾಗುತ್ತಿತ್ತು. ಇದನ್ನು ಮನಗಂಡು 9 ಸಾವಿರ ನಿಗಮದ ಸಿಬ್ಬಂದಿಗಳನ್ನು ನೇಮಕಾತಿ ಮಾಡಲು ಕ್ರಮ ಕೈಗೊಳ್ಳಲಾಗಿದೆ. ಈಗಾಗಲೇ 1619 ಸಿಬ್ಬಂದಿಗಳಿಗೆಕಲ್ಯಾಣಕರ್ನಾಟಕವಲಯಕ್ಕೆ ನೇಮಕಾತಿ ಆದೇಶ ನೀಡಲಾಗಿದೆ. ಖಾಲಿ ಇರುವ ಸಿಬ್ಬಂದಿಗಳ ನೇಮಕಾತಿ ಮಾಡಿದ ತಕ್ಷಣವೇ ಕೊರೋನಾ ಸಂದರ್ಭದಲ್ಲಿ ನಿಲ್ಲಿಸಲಾಗಿದ್ದ ಹಳೆ ಮಾರ್ಗ ಮತ್ತು ಪ್ರಯಾಣಿಕರ ದಟ್ಟಣೆ ಇರುವ ಹೊಸ ಮಾರ್ಗಗಳಲ್ಲಿ ಬಸ್ ಓಡಿಸಲಾಗುತ್ತದೆ ಎಂದರು.

ಪಂಪಾಪತಿ ಹೆಸರು ಪರಿಶೀಲನೆ; ದಾವಣಗೆರೆ ಬಸ್ ನಿಲ್ದಾಣಕ್ಕಾಗಿ ಶ್ರಮಿಸಿದ ಮಾಜಿ ಶಾಸಕರಾದ ಪಂಪಾಪತಿಯವರ ಹೆಸರಿಡಬೇಕೆಂದು ಬೇಡಿಕೆ ಇದ್ದು ಈ ಬಗ್ಗೆ ನಿಗಮದ ಆಡಳಿತ ಮಂಡಳಿಯಲ್ಲಿ ನಿರ್ಧರಿಸಬೇಕಾಗಿದೆ. ಈ ಬಗ್ಗೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುತ್ತದೆ ಎಂದು ಭರವಸೆ ನೀಡಿದರು.

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಅವರು ನೂತನ ಬಸ್ ನಿಲ್ದಾಣ ಉದ್ಘಾಟಿಸಿ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T